ಸಂಪುಟ 01 | ಸಂಚಿಕೆ 174 ಶುಕ್ರವಾರ 28 ಆಗಸ್ಟ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಅಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1)ರಕ್ಷಾ ಬಂಧನ Raksha Bandhan
ಭಾರತದಲ್ಲಿ, ವಿಶೇಷವಾಗಿ ಉತ್ತರ ಭಾರತದಲ್ಲಿ ಆಚರಿಸಲಾಗುವ ಈ ಹಬ್ಬದಲ್ಲಿ ಸಹೋದರಿಯರು ತಮ್ಮ ಸಹೋದರರ ಮಣಿಕಟ್ಟಿಗೆ ರಕ್ಷಣೆಯ ಸಂಕೇತವಾದ ರಾಖಿಯನ್ನು ಕಟ್ಟುತ್ತಾರೆ. ಪ್ರತಿಯಾಗಿ ಸಹೋದರರು ಉಡುಗೊರೆ ನೀಡಿ, ಜೀವನಪೂರ್ತಿ ತಮ್ಮ ಸಹೋದರಿಯರನ್ನು ರಕ್ಷಿಸುವುದಾಗಿ ಭರವಸೆ ನೀಡುತ್ತಾರೆ.

2)ರೇಡಿಯೋ ವಾಣಿಜ್ಯ ದಿನ (Radio Commercial Day): ರೇಡಿಯೋ ಜಾಹೀರಾತಿನ ಮಹತ್ವವನ್ನು ಸ್ಮರಿಸುವ ದಿನ.

3)ರಾಷ್ಟ್ರೀಯ ಬೋ ಟೈ ದಿನ (National Bow Tie Day): ಬೋ ಟೈ ಧರಿಸುವ ವಿಶಿಷ್ಟ ದಿನ.

## ಸುಭಾಷಿತ

ಕಡುಕಷ್ಟವು ಒಬ್ಬ ಸಾಮಾನ್ಯ ವ್ಯಕ್ತಿಯನ್ನು ಅಸಾಧಾರಣವಾದ ಗುರಿ ಸಾಧನೆಗೆ ಸಜ್ಜುಗೊಳಿಸಬಲ್ಲದು.

-ಸಿ.ಎಸ್.ಲೂಯಿಸ್

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ರಾಜ್ಯದ 101 ತಾಲ್ಲೂಕುಗಳು ಬರಪೀಡಿತವೆಂದು ಘೋಷಿಸಿ ಸರ್ಕಾರ ಅಧಿಕೃತ ಆದೇಶ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಪ್ರಸಕ್ತ 2026ರ ಮುಂಗಾರು (ಖಾರೀಫ್) ಹಂಗಾಮಿನಲ್ಲಿ ಮಳೆ ಕೊರತೆ ಹಾಗೂ ಒಣಹವೆಯ ಪರಿಣಾಮ ಎದುರಿಸುತ್ತಿರುವ ರಾಜ್ಯದ 101 ತಾಲೂಕುಗಳನ್ನು 'ಬರಪೀಡಿತ' ಎಂದು ಕರ್ನಾಟಕ ಸರ್ಕಾರ ಅಧಿಕೃತವಾಗಿ ಘೋಷಿಸಿ ಆದೇಶ ಹೊರಡಿಸಿದೆ.**

ಕೇಂದ್ರ ಸರ್ಕಾರದ 'ಬರ ನಿರ್ವಹಣಾ ಕೈಪಿಡಿ-2020'ರ ಮಾರ್ಗಸೂಚಿಗಳ ಅನ್ವಯ ವೈಜ್ಞಾನಿಕ ಮೌಲ್ಯಮಾಪನ ಹಾಗೂ ಬೆಳೆ ಹಾನಿ ಸಮೀಕ್ಷೆ (ಗ್ರೌಂಡ್ ಟ್ರೂಥಿಂಗ್) ನಡೆಸಿ ಈ ತೀರ್ಮಾನ ಕೈಗೊಳ್ಳಲಾಗಿದೆ ಘೋಷಣೆಯಾಗಿರುವ ಒಟ್ಟು 101 ತಾಲೂಕುಗಳ ಪೈಕಿ 89 ತಾಲೂಕುಗಳನ್ನು 'ತೀವ್ರ ಬರಪೀಡಿತ' (Severe) ಹಾಗೂ 12 ತಾಲೂಕುಗಳನ್ನು 'ಮಧ್ಯಮ ಬರಪೀಡಿತ' (Moderate) ಎಂದು ವರ್ಗೀಕರಿಸಲಾಗಿದೆ. ಈ ಆದೇಶವು ತಕ್ಷಣದಿಂದಲೇ ಜಾರಿಗೆ ಬರಲಿದ್ದು, ಮುಂದಿನ 6 ತಿಂಗಳ ಕಾಲ ಚಾಲ್ತಿಯಲ್ಲಿರಲಿದೆ.

ರಾಜ್ಯದಲ್ಲಿ ಮುಂಗಾರು ಮಳೆ ತೀವ್ರ ಕೊರತೆ : ಪ್ರಸಕ್ತ ವರ್ಷ ಮುಂಗಾರು ಮಳೆಯು ರಾಜ್ಯಾದ್ಯಂತ ತೀವ್ರ ಹಿನ್ನಡೆ ಕಂಡಿದೆ. ಆಗಸ್ಟ್ 21 ರವರೆಗಿನ ಅಂಕಿ-ಅಂಶಗಳ ಪ್ರಕಾರ, ವಾಡಿಕೆಯ 635 ಮಿ.ಮೀ. ಮಳೆಗೆ ಪ್ರತಿಯಾಗಿ ಕೇವಲ 437 ಮಿ.ಮೀ. ಮಳೆಯಾಗಿದ್ದು, ಒಟ್ಟಾರೆ ಶೇ. 31 ರಷ್ಟು ಮಳೆ ಕೊರತೆ ದಾಖಲಾಗಿದೆ. ಜೂನ್ ತಿಂಗಳಲ್ಲಿ: ವಾಡಿಕೆ 199 ಮಿ.ಮೀ. ಬದಲಿಗೆ 116 ಮಿ.ಮೀ. ಮಳೆಯಾಗಿದ್ದು, ಶೇ. 42 ರಷ್ಟು ಕೊರತೆಯಾಗಿದೆ. ಇದು ಕಳೆದ 50 ವರ್ಷಗಳಲ್ಲಿ (1976-2026) ಜೂನ್ ತಿಂಗಳಲ್ಲಿ ದಾಖಲಾದ 4ನೇ ಅತ್ಯಂತ ಕಡಿಮೆ ಮಳೆಯಾಗಿದೆ.

ಜುಲೈ ತಿಂಗಳಲ್ಲಿ: ವಾಡಿಕೆ 271 ಮಿ.ಮೀ. ಬದಲಿಗೆ 192 ಮಿ.ಮೀ. ಮಳೆಯಾಗಿದ್ದು, ಶೇ. 29 ರಷ್ಟು ಕೊರತೆ ಕಂಡುಬಂದಿದೆ. ಜೂನ್ 1 ರಿಂದ ಆಗಸ್ಟ್ 12 ರವರೆಗಿನ ಒಟ್ಟು 73



### ಮಧ್ಯಮ ಬರಪೀಡಿತ ತಾಲೂಕುಗಳು (ಒಟ್ಟು 12) :

ದೇವನಹಳ್ಳಿ (ಬೆಂಗಳೂರು ಗ್ರಾಮಾಂತರ), ದಾವಣಗೆರೆ, ಮದ್ದೂರು (ಮಂಡ್ಯ), ಪಾಂಡವಪುರ (ಮಂಡ್ಯ), ಲಿಂಗಸೂಗೂರು (ರಾಯಚೂರು), ರಾಯಚೂರು, ಕೊಪ್ಪ (ಚಿಕ್ಕಮಗಳೂರು), ನರಸಿಂಹರಾಜಪುರ (ಚಿಕ್ಕಮಗಳೂರು), ತರೀಕೆರೆ (ಚಿಕ್ಕಮಗಳೂರು), ಸೋಮವಾರಪೇಟೆ (ಕೊಡಗು), ಮುಂಡಗೋಡ (ಉತ್ತರ ಕನ್ನಡ), ಯಲ್ಲಾಪುರ (ಉತ್ತರ ಕನ್ನಡ)

ದಿನಗಳಲ್ಲಿ ಬರೋಬ್ಬರಿ 43 ದಿನಗಳು ತೀವ್ರ ಮಳೆ ಕೊರತೆ ಹಾಗೂ ಒಣ ಹವೆಯಿಂದ ಕೂಡಿದ್ದವು. ಇದರಿಂದಾಗಿ ಬಿತ್ತನೆ ಕುಂಠಿತಗೊಂಡು, ಬೆಳೆದ ಬೆಳೆಗಳು ತೇವಾಂಶದ ಕೊರತೆಯಿಂದ ಒಣಗಿವೆ.

ವೈಜ್ಞಾನಿಕ ಪರಿಶೀಲನೆ ಮತ್ತು ಗ್ರೌಂಡ್ ಟ್ರೂಥಿಂಗ್ : ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಏಖಓಆ-ಒಅ) ನಡೆಸಿದ ಮೊದಲ ಎರಡು ಹಂತಗಳ ಮೌಲ್ಯಮಾಪನದ ನಂತರ, 25 ಜಿಲ್ಲೆಗಳ 102 ತಾಲೂಕುಗಳಲ್ಲಿ 1,539 ಹಳ್ಳಿಗಳನ್ನು ಆಯ್ಕೆ ಮಾಡಿ 'ಕ್ರಾಪ್ ಲಾಸ್ ಜಿಟಿ' ಮೊಬೈಲ್ ಆಯಪ್ ಮೂಲಕ ಸ್ಥಳ ಪರಿಶೀಲನೆ (ಗ್ರೌಂಡ್ ಟ್ರೂಥಿಂಗ್) ನಡೆಸಲಾಯಿತು. ಈ ವರದಿಯ ಆಧಾರದ ಮೇಲೆ ಅಂತಿಮವಾಗಿ 101 ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲಾಗಿದೆ.

ಪರಿಹಾರ ಕಾರ್ಯಗಳಿಗೆ ಜಿಲ್ಲಾಧಿಕಾರಿಗಳಿಗೆ ಸೂಚನೆ : ಬರಪೀಡಿತ ತಾಲೂಕುಗಳ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿಗಳು ಎಸ್‌ಡಿಆರ್‌ಎಫ್ (SDRF) ನಿಯಮಾವಳಿಗಳ ಪ್ರಕಾರ ತುರ್ತು ಬರ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಅಧಿಕಾರ ನೀಡಿದೆ. ಕೃಷಿ ಆಯುಕ್ತರು, ತೋಟಗಾರಿಕಾ ನಿರ್ದೇಶಕರು ಹಾಗೂ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಜಂಟಿ ಬೆಳೆ ಹಾನಿ ಸಮೀಕ್ಷೆ ನಡೆಸಿ ಶೀಘ್ರ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ. ಮುಂದಿನ ದಿನಗಳಲ್ಲಿ ಮಳೆಯ ಪರಿಸ್ಥಿತಿಯನ್ನು ವಾರಕ್ಕೊಮ್ಮೆ ಅವಲೋಕಿಸಿ, ಅರ್ಹತೆ ಪಡೆಯುವ ಹೆಚ್ಚುವರಿ ತಾಲೂಕುಗಳನ್ನೂ ಬರಪೀಡಿತ ಪಟ್ಟಿಗೆ ಸೇರಿಸಲಾಗುವುದು ಎಂದು ಕಂದಾಯ ಇಲಾಖೆ ತಿಳಿಸಿದೆ.

### ಘೋಷಿತ ಬರಪೀಡಿತ ತಾಲೂಕುಗಳ ಪಟ್ಟಿ

ತೀವ್ರ ಬರಪೀಡಿತ ತಾಲೂಕುಗಳು (ಒಟ್ಟು 89)

ಬೆಂಗಳೂರು ನಗರ: ಆನೇಕಲ್, ಬೆಂಗಳೂರು ಉತ್ತರ, ಬೆಂಗಳೂರು ಪೂರ್ವ, ಯಲಹಂಕ
ಬೆಂಗಳೂರು ಗ್ರಾಮಾಂತರ: ಹೊಸಕೋಟೆ, ನೆಲಮಂಗಲ
ಬೆಂಗಳೂರು ದಕ್ಷಿಣ: ಮಾಗಡಿ, ರಾಮನಗರ
ಕೋಲಾರ: ಬಂಗಾರಪೇಟೆ, ಕೋಲಾರ, ಮಾಲೂರು, ಮುಳಬಾಗಿಲು, ಶ್ರೀನಿವಾಸಪುರ, ಕೆಜಿಎಫ್
ಚಿಕ್ಕಬಳ್ಳಾಪುರ: ಬಾಗೇಪಲ್ಲಿ, ಚಿಕ್ಕಬಳ್ಳಾಪುರ, ಚಿಂತಾಮಣಿ, ಗೌರಿಬಿದನೂರು, ಗುಡಿಬಂಡೆ, ಶಿಡ್ಲಘಟ್ಟ, ಚೇಳೂರು, ಮಂಚೇನಹಳ್ಳಿ
ತುಮಕೂರು: ಚಿಕ್ಕನಾಯಕನಹಳ್ಳಿ, ಗುಬ್ಬಿ, ಕೊರಟಗೆರೆ, ಕುಣಿಗಲ್, ಮಧುಗಿರಿ, ಪಾವಗಡ, ಸಿರಾ, ತುಮಕೂರು, ತುರುವೇಕೆರೆ
ಚಿತ್ರದುರ್ಗ: ಚಳ್ಳಕೆರೆ, ಹಿರಿಯೂರು, ಹೊಸದುರ್ಗ
ದಾವಣಗೆರೆ: ಚನ್ನಗಿರಿ, ಹೊನ್ನಾಳಿ, ನ್ಯಾಮತಿ
ಚಾಮರಾಜನಗರ: ಚಾಮರಾಜನಗರ, ಗುಂಡ್ಲುಪೇಟೆ, ಕೊಳ್ಳೇಗಾಲ, ಯಳಂದೂರು, ಹನೂರು
ಮೈಸೂರು: ಹೆಗ್ಗಡದೇವನಕೋಟೆ, ಹುಣಸೂರು, ಕೃಷ್ಣರಾಜನಗರ, ಮೈಸೂರು, ನಂಜನಗೂಡು, ಟಿ.ನರಸೀಪುರ, ಸರಗೂರು, ಸಾಲಿಗ್ರಾಮ
ಮಂಡ್ಯ: ಕೃಷ್ಣರಾಜಪೇಟೆ, ಮಳವಳ್ಳಿ, ಮಂಡ್ಯ, ನಾಗಮಂಗಲ, ಶ್ರೀರಂಗಪಟ್ಟಣ
ಬಳ್ಳಾರಿ: ಬಳ್ಳಾರಿ, ಸಂಡೂರು, ಕುರುಗೋಡು, ಕಂಪ್ಲಿ
ಕೊಪ್ಪಳ: ಗಂಗಾವತಿ, ಕುಕನೂರು, ಕನಕಗಿರಿ
ರಾಯಚೂರು: ದೇವದುರ್ಗ, ಮಾನ್ವಿ/ಮಸ್ಕಿ, ಅರಕೇರಾ
ಬೀದರ್: ಬೀದರ್, ಬಸವಕಲ್ಯಾಣ, ಹುಮ್ನಾಬಾದ್, ಚಿಟಗುಪ್ಪಾ
ಬಾಗಲಕೋಟೆ: ಬಾಗಲಕೋಟೆ, ಬೀಳಗಿ, ಜಮಖಂಡಿ, ಗುಳೇದಗುಡ್ಡ, ಇಳಕಲ್
ವಿಜಯಪುರ: ವಿಜಯಪುರ, ನಿಡಗುಂದಿ, ಕೊಲ್ಹಾರ
ಗದಗ: ಗಜೇಂದ್ರಗಡ
ಹಾಸನ: ಅರಕಲಗೂಡು, ಅರಸೀಕೆರೆ, ಚನ್ನರಾಯಪಟ್ಟಣ, ಹಾಸನ, ಹೊಳೆನರಸೀಪುರ
ಚಿಕ್ಕಮಗಳೂರು: ಅಜ್ಜಂಪುರ
ಯಾದಗಿರಿ: ಶಹಾಪುರ
ವಿಜಯನಗರ: ಹೊಸಪೇಟೆ, ಹೂವಿನಹಡಗಲಿ, ಹಗರಿಬೊಮ್ಮನಹಳ್ಳಿ, ಹರಪನಹಳ್ಳಿ

# ಕುಷ್ಟಗಿ ಮಾರುಕಟ್ಟೆಯಲ್ಲಿ ರಾಕಿ ಖರೀದಿ ಜೋರು

ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ಅಣ್ಣ-ತಂಗಿಯರ ಪ್ರೀತಿಯ ಸಂಬಂಧಕ್ಕೆ ಬೆಲೆ ಕಟ್ಟಲಾಗದು. ಈ ಸಂಬಂಧ ಮತ್ತಷ್ಟು ಗಟ್ಟಿಯಾಗಲಿ, ಅಣ್ಣನಿಗೆ ತಂಗಿಯ ಶ್ರೀರಕ್ಷೆಯಾಗಲಿ ಎಂಬ ಆಶಯದೊಂದಿಗೆ ಅಕ್ಕ-ತಂಗಿಯರು ಕಟ್ಟುವ ರಕ್ಷಾ ಬಂಧನ ಹಬ್ಬದ ಸಂಭ್ರಮ ಪಟ್ಟಣದಲ್ಲಿ ಕಳೆಗಟ್ಟಿದೆ.**

ನೂಲ ಹುಣ್ಣಿಮೆಯಂದು ಆಚರಿಸುವ ರಕ್ಷಾ ಬಂಧನದ ಹಿನ್ನೆಲೆಯಲ್ಲಿ ಹಬ್ಬದ ತಯಾರಿ ಜೋರಾಗಿದ್ದು, ಪಟ್ಟಣದ ಬಸವೇಶ್ವರ ವೃತ್ತದ ಬಳಿ ಗುರುವಾರ ಮಹಿಳೆಯರು ಹಾಗೂ ಯುವತಿಯರು ರಾಕಿ ಖರೀದಿಯಲ್ಲಿ ತೊಡಗಿರುವುದು ಕಂಡುಬಂತು. ವಿವಿಧ ವಿನ್ಯಾಸ, ಬಣ್ಣ ಹಾಗೂ ಮಾದರಿಯ ರಾಕಿಗಳು ಮಾರುಕಟ್ಟೆಗೆ ಲಗ್ಗೆ ಇಟ್ಟಿದ್ದು, ?5ರಿಂದ ಆರಂಭವಾಗಿ ?10, ?150 ಹಾಗೂ ?200ರವರೆಗಿನ ರಾಕಿಗಳು ಲಭ್ಯವಿವೆ. ಕಣ್ಣಿಗೆ ರಾಚುವಂತಹ ಆಕರ್ಷಕ ಬಣ್ಣಗಳ ಹಾಗೂ ನಾನಾ ವಿನ್ಯಾಸದ ರಾಕಿಗಳ ಖರೀದಿ ಭರಾಟೆ ಜೋರಾಗಿದೆ. ಬಸವೇಶ್ವರ ವೃತ್ತದಲ್ಲಿ ರಾಕಿ ಮಾರಾಟ ಮಾಡುತ್ತಿದ್ದ ವ್ಯಾಪಾರಿ ಕಲ್ಪನಾ ಆಂಜನೇಯ ರೇವಡಿ ಮಾತನಾಡಿ, "ಹಬ್ಬ ಸನಿಹವಾಗಿರುವುದರಿಂದ



ರಾಕಿ ಖರೀದಿಸಲು ಮಹಿಳೆಯರು ಬರುತ್ತಿದ್ದಾರೆ.

ವ್ಯಾಪಾರ ಚೆನ್ನಾಗಿದೆ. ಆದರೆ ಈ ಬಾರಿ ಮಳೆಯ ಕೊರತೆಯಿಂದ ಗ್ರಾಮೀಣ ಪ್ರದೇಶದ ಜನರು ಪಟ್ಟಣದತ್ತ ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿಲ್ಲ" ಎಂದರು. "ಉಳ್ಳವರು ಬಂಗಾರ, ಬೆಳ್ಳಿಯ ರಾಕಿ ಕಟ್ಟುತ್ತಾರೆ. ಆದರೆ ನಾವು ಮಾರುಕಟ್ಟೆಯಲ್ಲಿ ಸಿಗುವ ಸಾಮಾನ್ಯ ರಾಕಿ ಖರೀದಿಸುತ್ತಿದ್ದೇವೆ. ರಾಕಿ ಯಾವುದೇ ರೀತಿಯದ್ದಾದರೂ ಸಹೋದರನಿಗೆ ರಕ್ಷೆ ನೀಡಬೇಕು ಎಂಬುದೇ ನಮ್ಮ ಉದ್ದೇಶ" ಎಂದು ರಾಕಿ ಖರೀದಿಗೆ ಬಂದಿದ್ದ ಸ್ಥಳೀಯರಾದ ಶಶಿಕಲಾ ಕುಡತಿನಿ ಹೇಳಿದರು. ಒಟ್ಟಿನಲ್ಲಿ ಅಣ್ಣ-ತಂಗಿಯರ ಪ್ರೀತಿ, ವಿಶ್ವಾಸ ಹಾಗೂ ಅನುಬಂಧವನ್ನು ಸಾರುವ ರಕ್ಷಾ ಬಂಧನದ ತಯಾರಿ ಎಲ್ಲೆಡೆ ಜೋರಾಗಿದ್ದು, ಕುಷ್ಟಗಿ ಪಟ್ಟಣದಲ್ಲೂ ಹಬ್ಬದ ಸಂಭ್ರಮ ಕಳೆಗಟ್ಟಿದೆ.

# ವಿದ್ಯಾವಂತರು ಜಾತಿ ವ್ಯವಸ್ಥೆ ಮೈಗೂಡಿಸಿಕೊಳ್ಳುವುದು ದುರದೃಷ್ಟಕರ : ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ

ನೈಜ್ಯ ದೆಸೆ ನ್ಯೂಸ್

**ತಾಂಡವಪುರ: ಬೆಂಗಳೂರಿನ ಗಾಂಧಿ ಭವನದಲ್ಲಿ ಏರ್ಪಡಿಸಿದ್ದ ಸಮಾರಂಭದಲ್ಲಿ ಶೂದ್ರ ಸೇವಾ ಸಂಘದ ಉದ್ಘಾಟನೆಯನ್ನು ನೆರವೇರಿಸಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ವಿದ್ಯಾವಂತರು ಜಾತಿ ವ್ಯವಸ್ಥೆ ಮೈಗೂಡಿಸಿಕೊಳ್ಳುವುದು ದುರದಷ್ಟಕರ ಎಂದು ವಿಷಾದಿಸಿ ಅಭಿಪ್ರಾಯ ವ್ಯಕ್ತಪಡಿಸಿದರು ಜಾತಿವ್ಯವಸ್ಥೆಮೂಲಕಯಾರನ್ನೂಕೀಳಾಗಿಕಾಣಬಾರದು.**

ಚತುರ್ವರ್ಣ ವ್ಯವಸ್ಥೆಯನ್ನು ಮನುವಾದಿಗಳು ಈ ದೇಶದಲ್ಲಿ ಉದ್ದೇಶಪೂರ್ವಕಾಗಿ ಸೃಷ್ಟಿ ಮಾಡಿದರು. ಜಾತಿ ವ್ಯವಸ್ಥೆ ಹೋಗಬೇಕಾದರೆ ಸಮಾನತೆಯ ಸಮಾಜ ನಿರ್ಮಾಣ ಆಗಬೇಕು. ಶೂದ್ರ ವರ್ಗ ಅನೇಕ ವರ್ಷಗಳ ಕಾಲ ಅಕ್ಷರ ಸಂಸ್ಕೃತಿ, ಅವಕಾಶಗಳಿಂದ ದೂರ ಇತ್ತು. ಹೇಳಿದ ಅವರು ಶೂದ್ರ ವರ್ಗದವರು ಮೇಲ್ವರ್ಗದವರ ಜೊತೆ ಸ್ಪರ್ಧೆ ಮಾಡುವುದು ಅಸಾಧ್ಯ. ಅಕ್ಷರ ವಂಚಿತರಿಗೆ ಅಕ್ಷರ ಕಲಿತವರಿಂದ ಸೋಲಾಗುವುದು ಸಾಮಾನ್ಯ. ನಮ್ಮಲ್ಲಿನ ಭಿನ್ನಾಭಿಪ್ರಾಯಗಳ ಪರಿಣಾಮ ಬ್ರಿಟಿಷರು ನಮ್ಮನ್ನು ಆಳಿದರು. ಹೀಗಾಗಿ ಭಿನ್ನಾಭಿಪ್ರಾಯ ಮರೆತು ಎಲ್ಲ ವರ್ಗಗಳು ಒಂದಾಗಬೇಕು.

ಎಂದು ಸಿದ್ದರಾಮಯ್ಯನವರು ಹೇಳಿದರು ಅಸಮಾನತೆ ತೊಲಗಿ ಸಮ ಸಮಾಜ ನಿರ್ಮಾಣ ಆಗಬೇಕು ಎಂಬುದು ಸಂವಿಧಾನದ ಆಶಯ. ಬುದ್ಧ, ಬಸವ, ಅಂಬೇಡ್ಕರ್ ಅವರು ಹೇಳಿದ್ದೂ ಇದನ್ನೇ. ಪಟ್ಟಭದ್ರ ಹಿತಾಸಕ್ತಿಗಳು ನಮ್ಮನ್ನು ಒಂದಾಗಲು



ಬಿಡುವುದಿಷಲ್ಲ. ಜಾತಿ ಹೋಗಬೇಕಾದರೆ ವಿದ್ಯಾವಂತರು ವೈಜ್ಞಾನಿಕವಾಗಿ ಆಲೋಚನೆ ಮಾಡುವುದನ್ನು ಕಲಿಯಬೇಕು. ನಾನು ಸಿಎಂ ಆಗಿದ್ದ ಸಂದರ್ಭದಲ್ಲಿ ಮೌಢ್ಯ ಪ್ರತಿಬಂಧಕ ಕಾಯಿದೆ ಜಾರಿಗೆ ಬಂತು. ಆದರೆ, ಸಮರ್ಪಕವಾಗಿ ಜಾರಿಗೆ ಬಂದಿಲ್ಲ. ಇದಕ್ಕೆ ವಿದ್ಯಾವಂತರೂ ಕಾರಣ. ವಿದ್ಯಾವಂತರಲ್ಲಿ ಬಹುಪಾಲು ಈಗಲೂ ಮೌಢ್ಯ, ಕಂದಾಚಾರಗಳನ್ನ ಪಾಲನೆ ಮಾಡುತ್ತಾರೆ. ಇಂದಿನ ಪೀಳಿಗೆ ವೈಜ್ಞಾನಿಕತೆ, ವೈಚಾರಿಕತೆ ಬೆಳೆಸಿಕೊಳ್ಳದಿದ್ದರೆ ಸಮಾನತೆಯ ಸಮಾಜ ನಿರ್ಮಾಣ ಅಸಾಧ್ಯ. ಜಾತಿ ವ್ಯವಸ್ಥೆಯೂ ಹೋಗದು. ಎಂದು ವಿಷಾದ ವ್ಯಕ್ತಪಡಿಸಿದರು ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳು ಅಸಮಾನತೆ ನಿವಾರಣೆಗೆ ಸಹಾಯಕ. ವ್ಯವಸ್ಥೆ ಬದಲಾವಣೆಗೆ ಎಲ್ಲರ ಪ್ರಯತ್ನ ಅಗತ್ಯ. ಇದಕ್ಕೆ ಸಮಯವೂ ಬೇಕು. ಸರಿಯಾದ ಮಾರ್ಗದಲ್ಲಿ ಹೋದಾಗ ಪ್ರಯತ್ನಕ್ಕೆ ಯಶ ಸಿಗುತ್ತದೆ ಸಂಘದ ಅಧ್ಯಕ್ಷ, ಶೂದ್ರ ಪತ್ರಿಕೆ ಸಂಪಾದಕ ರಾಮೇಗೌಡ, ಸಂಚಾಲಕ ಮುರಳೀದರ ಹಾಲಪ್ಪ ಉಪಸ್ಥಿತರಿದ್ದರು.

# ಹೊಸಳ್ಳಿ ಕ್ಯಾಂಪ್‌ನಲ್ಲಿ ಋತುಮಾನದ ಜ್ವರ (ಇನ್‌ಫ್ಲುಯೆಂಜಾ) ಕುರಿತು ಸಾರ್ವಜನಿಕ ಜಾಗೃತಿ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ಹೊಸಳ್ಳಿ ಕ್ಯಾಂಪು ಅಂಗನವಾಡಿ ಕೇಂದ್ರದಲ್ಲಿ ಒರ ವಲಯದ ಮಕ್ಕಳ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಲ್ಲಿ ತಾಯಂದಿರಿಗೆ ಮತ್ತು ಗರ್ಭಿಣಿಯರಿಗೆ ಸಾರ್ವಜನಿಕರಿಗೆ ಶ್ರೀಮತಿ ಗೀತಾ ಹಿರೇಮಠ್ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ್ ಇವರು ತಾಯಂದಿರನ್ನು ಉದ್ದೇಶಿಸಿ ಮಾತನಾಡಿದರು ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಯಚೂರ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯ ಸಿಂಧನೂರು ಪ್ರಾಥಮಿಕ ಆರೋಗ್ಯ ಕೇಂದ್ರ ದಡಸುಗುರ್ ಇವರ ಸಂಯುಕ್ತ ಆಶ್ರಯದಲ್ಲಿ ಹೊಸಳ್ಳಿ ಇಎ ಆಯುಷ್ ಆರೋಗ್ಯ ಕೇಂದ್ರಕ್ಕೆ ಒಳಪಡುವ ವಸಳ್ಳಿ ಕ್ಯಾಂಪನಲ್ಲಿ**

"ಋತುಮಾನದ ಜ್ವರದ ಕುರಿತು ಜಾಗೃತಿ"



ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು ಸಾಮಾನ್ಯವಾಗಿ ಬ್ಲೂ ಎಂದು ಕರೆಯಲಾಗುವ ಋತುಮಾನದ ಜ್ವರ ಇನ್ ಫ್ಲೂ ್ಯಯೆಂಜಾ ವೈರಸಗಳಿಂದ ಉಂಟಾಗುವ ಸಾಂಕ್ರಾಮಿಕ ಉಸಿರಾಟದ ಖಾಯಿಲೆಯಾಗಿದೆ. ಇನ್ ಫ್ಲೂ ್ಯಯೆಂಜಾ ವರ್ಷಕ್ಕೆ ಎರಡು ಬಾರಿ ಜನೆವರಿ ಯಿಂದ ಮಾರ್ಚ್ ಮತ್ತು ಜೂಲೈ ಯಿಂದ ಸೆಪ್ಟೆಂಬರ್ ವರಗೆ ಹೆಚ್ಚಾಗಿ ಇರುತ್ತದೆ ಆದರಿಂದ ಸಾರ್ವಜನಿಕರು ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿವಹಿಸಬೇಕು ಎಂದು ಹೇಳಲಾಯಿತು, ಸಾರ್ವಜನಿಕರು ಋತುಮಾನದ ಜ್ವರದ ಹರಡುವಿಕೆಯನ್ನು ತಡೆಗಟ್ಟಲು ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕು ಏನು ಮಾಡಬೇಕು ಸೀನುವಾಗ ಮತ್ತು ಕೆಮ್ಮುವಾಗ ಮೂಗು ಮತ್ತು ಬಾಯಿಯನ್ನು ಕರವಸ್ತ್ರದಿಂದ ಮುಚ್ಚಿಕೊಳ್ಳಬೇಕು ಸೋಪು ಮತ್ತು ನೀರಿನಿಂದ ಕೈಗಳನ್ನು ನಿಯಮಿತವಾಗಿ ತೊಳೆಯಬೇಕು.

ಸಾಕಷ್ಟು ಪ್ರಮಾಣದಲ್ಲಿ ನೀರನ್ನು ಸೇವಿಸಬೇಕು ರೋಗಲ ಲಕ್ಷಣಗಳಿರುವ ವ್ಯಕ್ತಿಗಳು ಇದರಿಂದ ಪ್ರತ್ಯೇಕವಾಗಿರಬೇಕು ಹಾಗೂ ಮುನ್ನೆಚ್ಚರಿಕೆ ಕ್ರಮವಹಿಸುವುದು ಸೂಕ್ತ, ಏನು ಮಾಡಬಾರದು ಕಣ್ಣು ಮೂಗು ಮತ್ತು ಬಾಯಿಯನ್ನು ಕೈಗಳಿಂದ ಪದೇಪದೇ ಮುಟ್ಟಬಾರದು, ಸ್ವಯಂ ಔಷಧೋಪಚಾರ ಮಾಡಿಕೊಳ್ಳಬಾರದು ವೈದ್ಯರನ್ನ ಸಂಪರ್ಕಿಸಬೇಕು. ರೋಗ ಲಕ್ಷಣಗಳಿರುವ ಸಂದರ್ಭದಲ್ಲಿ ಕೈಕುಲುಕುವುದನ್ನು ತಪ್ಪಿಸಬೇಕು ರೋಗ ಲಕ್ಷಣಗಳಿರುವಾಗ ಜನಸಂದಣಿ ಇರುವ ಸ್ಥಳಗಳಿಗೆ ಹೋಗಬಾರದು ಬಳಸಿದ ಕರವಸ್ತ್ರಗಳನ್ನು ಮರುಬಳಕೆ ಮಾಡಬಾರದು ಇನ್ ಫ್ಲೂ ್ಯಯೆಂಜಾ (ಋತು ಮಾನದ ಜ್ವರ ) ಸಂಬಂಧಿಸಿದ ರೋಗ ಲಕ್ಷಣಗಳು ಕಂಡುಬಂದಲ್ಲಿ ಸಮೀಪದ ಸರ್ಕಾರಿ ಆಸ್ಪತ್ರೆ ಹಾಗೂ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ವೈದ್ಯಕೀಯ ಚಿಕಿತ್ಸೆ ಮತ್ತು ಸಲಹೆ ಪಡೆಯುವಂತೆ ತಿಳಿಸಲಾಯಿತು.

ಈ ಸಂದರ್ಭದಲ್ಲಿ ನಿಂಗಮ್ಮ ಪಿ ಎಚ್ ಸಿ ಓ, ಜ್ಞಾನೇಶ್ವರಿ ಸಿ ಎಚ್ ಓ, ಮಲ್ಲಿಕಾರ್ಜುನ್ ಎಚ್‌ಐಒ, ಋತಮ್ಮ ಆಶಾ ಕಾರ್ಯಕರ್ತೆ ಹಾಗೂ ಗರ್ಭಿಣಿ ತಾಯಂದಿರು ಸಾರ್ವಜನಿಕರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

### ಸಂಜೆಯ ಸುವರ್ಣ ನೆನಪು

ಸಂಜೆಯ ಸೂರ್ಯ ನಿಧಾನವಾಗಿ ಮರೆಯುವ
ಹೊತ್ತು, ಆಕಾಶ ತೊಡುವ ಬಂಗಾರದ ಬಣ್ಣದ
ಹೊತ್ತು. ತಂಪಾದ ಗಾಳಿ ಮನವನ್ನು ತಾಕಿದಾಗ,
ಹಳೆಯ ನೆನಪುಗಳು ಹೃದಯದಲ್ಲಿ ಮೂಡಿದಾಗ.

ಹಕ್ಕಿಗಳ ಕಲರವ ಗೂಡಿಗೆ ಮರಳುವ ಸಮಯ,
ಪ್ರಕೃತಿಯ ಸೌಂದರ್ಯ ನೋಡುವ ಸವಿನಯ.
ಕೆಂಪು ಮೋಡಗಳ ನಡುವೆ ಸೂರ್ಯನ ನಗು,
ಮನದೊಳಗೆ ಮೂಡಿಸುವ ಸಂತಸದ ಹೊನಲು.

ಕಳೆದ ದಿನಗಳ ಸಿಹಿ ಕ್ಷಣಗಳು ನೆನಪಾಗಿ,
ಬಾಲ್ಯದ ಕಥೆಗಳು ಮನದಲ್ಲಿ ಕನಸಾಗಿ.
ಸ್ನೇಹಿತರ ಜೊತೆ ಕಳೆದ ಆ ದಿನಗಳು,
ಇಂದಿಗೂ ಮನದ ಅಮೂಲ್ಯ ನೆನಪುಗಳು.

ಸಂಜೆಯ ನೆರಳು ನಿಧಾನವಾಗಿ ಹರಡಿದಾಗ,
ಚಂದಿರನ ಬೆಳಕು ಭುವಿಗೆ ಇಳಿದಾಗ.
ಕಾಲವು ಕಳೆದರೂ ಮಾಸದ ಆ ನೆನಪು,
ಹೃದಯದಲ್ಲಿ ಉಳಿಯುವ ಸುವರ್ಣ ನೆನಪು.

ಪ್ರತಿ ಸಂಜೆಯೂ ಹೊಸ ಕಥೆ ಹೇಳುವುದು,
ಜೀವನದ ಸತ್ಯವನ್ನು ಮನಕ್ಕೆ ತಿಳಿಸುವುದು.
ನೆನಪುಗಳ ಜೊತೆಗೆ ಬದುಕು ಸಾಗುವುದು,
ಸಂಜೆಯ ಸುವರ್ಣ ಕ್ಷಣ ಸದಾ ಹೊಳೆಯುವುದು

## ನೇತ್ರದಾನ ಪಾಕ್ಷಿಕ ದಿನಾಚರಣೆ: ನಿಮ್ಮ ಮರಣದ ನಂತರ ನೇತ್ರದಾನ ಮಾಡಿ ಅಂಧರ ಬಾಳಿಗೆ ಬೆಳಕು ನೀಡಿ

**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನೇತ್ರ ವಿಭಾಗ ರಾಯಚೂರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಸ್ಥಳೀಯ ಅಂಗನವಾಡಿ ಕೇಂದ್ರದಲ್ಲಿ ನೇತ್ರದಾನದ ಕುರಿತು ಜನಜಾಗೃತಿ ಮೂಡಿಸುವ ಕಾರ್ಯಕ್ರಮ , ಸ್ಥಳೀಯ ಸುಲ್ತಾನಪುರ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಯಿತು.**

ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಾತನಾಡಿ, ನೇತ್ರದಾನದ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು. ಪ್ರತಿಯೊಬ್ಬರೂ ತಮ್ಮ ಮರಣಾನಂತರ ನೇತ್ರದಾನ ಮಾಡುವ ಮೂಲಕ ಅಂಧರ ಬಾಳಿಗೆ ಬೆಳಕು ನೀಡಬಹುದಾಗಿದೆ ಎಂದು ತಿಳಿಸಿದರು. ನೇತ್ರದಾನ ಮಾಡಲು ಆಸಕ್ತರು ಇಲಾಖೆಯ



ಅಧಿಕೃತ "ಜೀವನ ಸಾರ್ಥಕತೆ" ವೆಬ್‌ಸೈಟ್‌ಗೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳಬೇಕು. ನೋಂದಣಿ ಮಾಡಿಕೊಂಡಿರುವ ಮಾಹಿತಿಯನ್ನು ಕುಟುಂಬದ ಸದಸ್ಯರು ಹಾಗೂ ಸಂಬಂಧಿಕರಿಗೆ ತಿಳಿಸಿ, ಮರಣಾನಂತರ ನೇತ್ರದಾನ ನೆರವೇರಲು ಸಹಕರಿಸಬೇಕು ಎಂದು ಕರೆ ನೀಡಿದರು.

ನಂತರ ಮಾತನಾಡಿದ ಆರೋಗ್ಯ ನಿರೀಕ್ಷಣಾಧಿಕಾರಿ ಅಂಬಮ್ಮ ಅವರು, ಕಣ್ಣು ಪಂಚೇಂದ್ರಿಯಗಳಲ್ಲಿ ಅತ್ಯಂತ ಪ್ರಮುಖ ಅಂಗವಾಗಿದ್ದು, ಪ್ರತಿಯೊಬ್ಬರೂ ಕಣ್ಣಿನ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ಹೇಳಿದರು. ಕಣ್ಣಿನ ಯಾವುದೇ ತೊಂದರೆ ಕಂಡುಬಂದಲ್ಲಿ ತಕ್ಷಣ ನೇತ್ರ ತಜ್ಞರ ಸಲಹೆ ಹಾಗೂ ತಪಾಸಣೆ ಪಡೆಯಬೇಕು ಎಂದು ತಿಳಿಸಿದರು. ಆಗಸ್ಟ್ 25ರಿಂದ ಸೆಪ್ಟೆಂಬರ್ 8ರವರೆಗೆ 41ನೇ ರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಆಚರಿಸಲಾಗುತ್ತಿದ್ದು, ಈ ಅವಧಿಯಲ್ಲಿ ನೇತ್ರದಾನದ ಕುರಿತು ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಒಬ್ಬ ವ್ಯಕ್ತಿಯ ನೇತ್ರದಾನದಿಂದ ಇಬ್ಬರು ಕಾರ್ನಿಯಾ ಅಂಧರಿಗೆ ದೃಷ್ಟಿ ನೀಡಲು ಸಾಧ್ಯವಾಗುತ್ತದೆ. ಆದ್ದರಿಂದ ಸಾರ್ವಜನಿಕರು ಮರಣಾನಂತರ ನೇತ್ರದಾನ ಮಾಡಲು ಮುಂದೆ ಬರಬೇಕು. "ನಮ್ಮ ನೇತ್ರಗಳು ಸದಾ ಜೀವಂತವಾಗಿರಲಿ, ನೇತ್ರದಾನ ನಮ್ಮ ಕುಟುಂಬದ ಸಂಪ್ರದಾಯವಾಗಲಿ" ಎಂಬ ಸಂದೇಶವನ್ನು ನೀಡಿದರು. ಜೊತೆಗೆ, ಜೀವನದ ವಿವಿಧ ಅಂಗಗಳನ್ನು ದಾನ ಮಾಡುವ ಮೂಲಕ ಇತರರ ಬದುಕಿಗೆ ನೆರವಾಗಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಮಂಜುನಾಥ, ವೆಂಕಟೇಶ , ಬಸವರಾಜ, ನಿಂಗಪ್ಪ, ಅಂಗನವಾಡಿ ಕಾರ್ಯಕರ್ತೆಯರಾದ ಶರಣಮ್ಮ (ಅಂಗನವಾಡಿ ಕೇಂದ್ರ-1), ಶರಣಮ್ಮ (ಅಂಗನವಾಡಿ ಕೇಂದ್ರ-2), ಆಶಾ ಕಾರ್ಯಕರ್ತೆ ಶಿವಮ್ಮ, ತಾಯಂದಿರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಸಂಚಾರಕ್ಕೆ ತಗ್ಗುಗುಂಡಿ ಸಂಕಷ್ಟ, ಹಾಲಾಪೂರ-ಕವಿತಾಳ ಮಾರ್ಗಕ್ಕೆ ಮುಕ್ತಿ ಯಾವಗ?

**ನೈಜ್ಯ ದೆಸೆ ನ್ಯೂಸ್**

**ಹಾಲಾಪೂರ:** ನಿಂದ ಕವಿತಾಳಗೆ ಕಲ್ಪಿಸುವ ಮುಖ್ಯ ರಸ್ತೆಯು ಸಂಪೂರ್ಣವಾಗಿ ತಗ್ಗು ಗುಂಡಿಗುಂಡಿಗಳಿಂದ ಕೂಡಿದ್ದು ನಿತ್ಯ ಸಂಚರಿಸುವ ಪ್ರಯಾಣಿಕರು, ವಾಹನ ಸವಾರರು,ಶಾಲಾ ವಾಹನಗಳು ಜೀವವನ್ನು ಅಂಗೈಯಲ್ಲಿ ಹಿಡಿದುಕೊಂಡು ಪ್ರಯಾಣಿಸುವ ಸಂದರ್ಭ ಒದಗಿಬಂದಿದೆ,



ವರ್ಷಗಳಿಂದ ಇದೆ ಹಣಿಬರಹ,ಪ್ರತಿವರ್ಷ ರಸ್ತೆ ಸುಧಾರಿಸಲು ಕೋಟಿ ಕೋಟಿ ಹಣ ಖರ್ಚು ಮಾಡುತ್ತಾರೆ ಆದರೆ ತಗ್ಗು ಗುಂಡಿ ಮಾತ್ರ ಹಾಗೆ ಇರುತ್ತವೆ,

**"ನಾಗಲದಿನ್ನಿಯಿಂದ ತೊರಣದಿನ್ನಿವರಗೆ ಹೊಸ ರಸ್ತೆಗೆ ನಿರ್ಮಿಸಲು ಶಾಸಕರು ಸೂಚಿಸಿದ್ದು ಅದಕ್ಕೆ ಸಮಯ ಬೇಕು".... ರಜತ್ ಎಇಇ ಲೋಕೋಪಯೋಗಿ ಇಲಾಖೆ "ರಸ್ತೆ ಸಂಪೂರ್ಣ ತಗ್ಗುಗುಂಡಿಗಳಿಂದ ಕೂಡಿದ್ದು ಪ್ರಯಾಣಕ್ಕೆ ತುಂಬಾ ತೊಂದರೆ, ಬೇಗನೆ ಸರಿಪಡಿಸಲು ಆಗ್ರಹ".... ಅಮರೇಶ ಹಾಲಾಪೂರ**

ಈ ರಸ್ತೆಯು ರಾಯಚೂರು, ಮಾನ್ವಿ ಪಟ್ಟಣಕ್ಕೆ ಸಂಪರ್ಕ ಹೊಂದಿದ್ದು,ನೂರಾರು ವಾಹನಗಳು ಸಂಚಾರ,ಇದರಿಂದ ಧೂಳು ಮತ್ತು ಅಪಾಯದಿಂದ ಕೂಡಿದ್ದು,ಮಳೆಗಾಲದಲ್ಲಿ ನೀರುನಿಂತು ಅದರ ಕತೆ ಹೇಳತಿರದು,ರೈತರು ಕೃಷಿ ಚಟುವಟಿಕೆಗಳಿಗೆ ಹೊಲಗದ್ದೆಗಳಿಗೆ ತೆರಳು ತುಂಬಾ ಸಂಕಷ್ಟ, ಸಂಬಂಧಿಸಿದ ಲೊಕೊಪಯೋಗಿ ಅಧಿಕಾರಿಗಳು ಮತ್ತು ಜನಪ್ರತಿನಿದಿಗಳು ಸೂಕ್ತ ಗಮನಹರಿಸುವ ಕೆಲಸ ಮಾಡದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಈಗಲಾದರೂ ಅಪಾಯ ಹಾಗುವ ಮುನ್ನ ಉಪಾಯ ಮಾಡಿ ತಗ್ಗು ಗುಂಡಿ ಮುಚ್ಚುವ ಕೆಲಸ ಮಾಡಬೇಕೆಂದು ಜನರ ಆಶಯವಾಗಿದೆ.

## ಸಿಲೆಂಡರ್ ಸಮರ್ಪಕ ಪೂರೈಕೆಗೆ ಆಗ್ರಹಿಸಿ ತಹಸಿಲ್ದಾರ್ ಗೆ ಮನವಿ

**ನೈಜ್ಯ ದೆಸೆ ನ್ಯೂಸ್**

**ತಾಳಿಕೋಟಿ: ಪಟ್ಟಣದಲ್ಲಿದ್ದ ಎಲ್ಪಿಜಿ ಸಿಲಿಂಡರ್ ಗ್ಯಾಸ್ ಏಜೆನ್ಸಿ ಗ್ರಾಮೀಣ ಭಾಗದವರಿಗೆ ಕೊಟ್ಟಿರುವುದರಿಂದ ಬಳಕೆದಾರರಿಗೆ ತೀವ್ರ ತೊಂದರೆಯಾಗುತ್ತಿದ್ದು ಇದನ್ನು ತಪ್ಪಿಸಲು ಏಜೆನ್ಸಿಯನ್ನು ಸ್ಥಳೀಯರಿಗೆ ಕೊಡುವಂತಾಗಲು ಕ್ರಮ ವಹಿಸಬೇಕೆಂದು ಆಗ್ರಹಿಸಿ ಪಟ್ಟಣದ ನಾಗರಿಕರು ತಹಶೀಲ್ದಾರ್ ಮಲ್ಲಿಕಾರ್ಜುನ ಅರಕೇರಿ ಇವರಿಗೆ ಗುರುವಾರ ಮನವಿ ಸಲ್ಲಿಸಿದರು.**

ಮನವಿ ಪತ್ರದಲ್ಲಿ ತಾಳಿಕೋಟಿ ಪಟ್ಟಣ ಸುಮಾರು 50 ಸಾವಿರ ಜನಸಂಖ್ಯೆನ್ನು ಹೊಂದಿರುವ ಒಂದು ಪ್ರಮುಖ ವ್ಯಾಪಾರಿ ಕೇಂದ್ರವಾಗಿದ್ದು, ಪಟ್ಟಣದಲ್ಲಿ ಎಲ್ಪಿಜಿ ಸಿಲೆಂಡರ್ ಬಳಕೆದಾರರ ಸಂಖ್ಯೆ ಬಹಳಷ್ಟು ಇದೆ. ಈ ಮೊದಲು ಇದರ ವಿತರಕರು ಪಟ್ಟಣದವರೇ ಆಗಿರುವುದರಿಂದ ಬಳಕೆದಾರರಿಗೆ ಸಮಸ್ಯೆ ಆಗಿರಲಿಲ್ಲ, ಆದರೀಗ ಇದರ ಏಜನ್ಸಿಯನ್ನು ತಾಲೂಕಿನ ಕಲಕೇರಿ ಗ್ರಾಮದವರಿಗೆ ನೀಡುವುದರಿಂದ ಅಲ್ಲಿಂದ ಇಲ್ಲಿಗೆ ಸಿಲಿಂಡರ್ ಪೂರೈಕೆ ಸಮರ್ಪಕವಾಗಿ ಹಾಗೂ ಸಮಯಕ್ಕೆ ಸರಿಯಾಗಿ ಆಗುತ್ತಿಲ್ಲ. ಪಟ್ಟಣದ ನಿವಾಸಿಗಳಿಗೆ 25 ದಿನಗಳಲ್ಲಿ ಸಿಲಿಂಡರ್ ಪೂರೈಕೆ ಆಗಬೇಕು ಆದರೆ ಅದನ್ನು ಗ್ರಾಮಾಂತರ ಪ್ರದೇಶಗಳ ನಿವಾಸಿಗಳಿಗೆ ನೀಡುವಂತೆ 45 ದಿನಗಳ ನಂತರ ನೀಡಲಾಗುತ್ತಿದೆ ಇದರಿಂದ ಬಳಕೆದಾರರಿಗೆ ಸಾಕಷ್ಟು ತೊಂದರೆಯಾಗುತ್ತಿದೆ. ಇದರ ಕುರಿತು ಈಗಾಗಲೇ ಸಾಕಷ್ಟು ಮನವಿಗಳನ್ನೂ ನೀಡಲಾಗಿದೆ ಆದರೂ ಇಲ್ಲಿವರೆಗೆ ಈ ಗಂಭೀರ ಸಮಸ್ಯೆಕ್ಕೆ ಸ್ಪಂದಿಸುವ ಕಾರ್ಯ ಆಗಿಲ್ಲ.

ಆದಷ್ಟು ಬೇಗ ಈ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಬೇಕು. ತಾಳಿಕೋಟಿ ಪಟ್ಟಣದವರಿಗೇ ಏಜೆನ್ಸಿ ನೀಡುವವರೆಗೆ ಈಗಿರುವ ಕಲಿಕೇರಿ ಗ್ರಾಮದ ವಿತರಕರು ಪಟ್ಟಣದ ಬಳಕೆದಾರರಿಗೆ 25 ದಿವಸಗಳಂತೆ ಸಿಲಿಂಡರ್ ಪೂರೈಕೆ ಮಾಡಲು ಕಟ್ಟುನಿಟ್ಟಿನ ಆದೇಶ ನೀಡಬೇಕು.ಈ ಮನವಿಯ ನಂತರವೂ ಕ್ರಮ ವಹಿಸದೆ ಹೋದಲ್ಲಿ ಮುಂದಿನ ದಿನಗಳಲ್ಲಿ ಪಟ್ಟಣದ ನಾಗರೀಕರಾದ ನಾವುಗಳು ವಿವಿಧ ಸಂಘಟನೆಗಳ ಜೊತೆಗೂಡಿ ಉಗ್ರವಾದ ಹೋರಾಟವನ್ನು ನಡೆಸುವುದು



ಅನಿವಾರ್ಯವಾಗುತ್ತದೆ. ಇದಕ್ಕೆ ಅವಕಾಶ ಮಾಡಿ ಕೊಡಬಾರದೆಂದು ತಿಳಿಸಲಾಗಿದೆ. ಈ ಸಮಯದಲ್ಲಿ ಪ್ರಮುಖರಾದ ನ್ಯಾಯವಾದಿ ಗಂಗಾಧರ ಕಸ್ತೂರಿ, ಮಂಜುನಾಥ ಶೆಟ್ಟಿ, ಪರುಶರಾಮ ತಂಗಡಗಿ, ರಾಮು ಜಗತಾಪ, ಚನ್ನಬಸ್ಸು ಸರಶೆಟ್ಟಿ, ರಘುಸಿಂಗ್ ಹಜೇರಿ(ಸೇಟ), ಸಿರಸಕುಮಾರ ಹಜೇರಿ, ಅಬ್ದುಲ್ ರಜಾಕ ಮಮದಾಪೂರ, ತಿಪ್ಪಣ್ಣ ಸಜ್ಜನ, ಮಲ್ಲು ಮೇಟಿ ಮತ್ತಿತರರು ಇದ್ದರು.

## ಶಾಸಕ ಆರ್. ಬಸನಗೌಡ ತುರುವಿಹಾಳ ಜಾಬ್ ಕಾರ್ಡ್ ಮೇಳಕ್ಕೆ ಚಾಲನೆ; ಜಾಬ್ ಕಾರ್ಡ್ ವಿತರಣೆ
## ಗುಳೆ ತಪ್ಪಿಸಲು ಉದ್ಯೋಗ ಖಾತ್ರಿ ಯೋಜನೆಗೆ ಒತ್ತು- ಶಾಸಕ ಆರ್ ಬಸನಗೌಡ

**ನೈಜ್ಯ ದೆಸೆ ನ್ಯೂಸ್**

**ಮಸ್ಕಿ: ಹವಾಮಾನ ವೈಪರೀತ್ಯದಿಂದ ಕೃಷಿ ಚಟುವಟಿಕೆಗಳಿಗೆ ಹಿನ್ನಡೆಯಾಗಿ ಸಂಕಷ್ಟಕ್ಕೆ ಸಿಲುಕಿರುವ ಗ್ರಾಮೀಣ ಕುಟುಂಬಗಳಿಗೆ ಸ್ಥಳೀಯವಾಗಿಯೇ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ವಿಬಿಜಿ ರಾಮ್‌ಜಿ ಯೋಜನೆಯಡಿ ನಿರಂತರ ಕೆಲಸ ಒದಗಿಸಲಾಗುವುದು ಎಂದು ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಹಾಗೂ ಶಾಸಕ ಆರ್. ಬಸನಗೌಡ ತುರ್ವಿಹಾಳ ಹೇಳಿದರು.**

ಮಸ್ಕಿ ತಾಲೂಕಿನ ತಲೇಖಾನ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಡಗಲಿ ಗ್ರಾಮದ ಕೆರೆ ಅಭಿವೃದ್ಧಿ ಕಾಮಗಾರಿ ಸ್ಥಳದಲ್ಲಿ ಗುರುವಾರ ಆಯೋಜಿಸಿದ್ದ



**ಹಡಗಲಿ ಗ್ರಾಮದ ಕಲ್ಯಾಣಿಯನ್ನು ಶಾಸಕ ಬಸನಗೌಡ ತುರ್ವಿಹಾಳ ವೀಕ್ಷಿಸಿ, ವಿಬಿಜಿ ರಾಮ್‌ಜಿ ಯೋಜನೆಯಡಿ ಅಭಿವೃದ್ಧಿಪಡಿಸಲು ಕೂಡಲೇ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಶಾಸಕ ಆರ್ ಬಸನಗೌಡ ತುರ್ವಿಹಾಳ.**

ಜಾಬ್‌ಕಾರ್ಡ್ ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.ಕೂಲಿಕಾರರು ಸಮರ್ಪಕವಾಗಿ ಕೆಲಸ ನಿರ್ವಹಿಸಿ, ತಮಗೆ ದೊರೆಯಬೇಕಾದ ಪೂರ್ಣ ಕೂಲಿ ಪಡೆಯಬೇಕು. ಕಾಮಗಾರಿಗಳ ಅಳತೆ, ಕೆಲಸದ ಅವಧಿ ಹಾಗೂ ಕೂಲಿ ಪಾವತಿ ಕುರಿತು ಅಧಿಕಾರಿಗಳು ಮತ್ತು ತಾಂತ್ರಿಕ ಸಿಬ್ಬಂದಿ ಕೂಲಿಕಾರರಿಗೆ ಸ್ಪಷ್ಟ ಮಾಹಿ

## ನಾಯಕ ಮನ್ವಿತ್‌ಗೆ 'ಅತ್ಯುತ್ತಮ ನಟ' ಪ್ರಶಸ್ತಿ

**ನೈಜ್ಯ ದೆಸೆ ನ್ಯೂಸ್**

**ಧಾರವಾಡ : ಕನ್ನಡ ಚಿತ್ರರಂಗದ ನಾಯಕ ನಟರಾಗಿ ಭರವಸೆಯನ್ನು ಹುಟ್ಟುಹಾಕಿರುವ ಯುವ ನಾಯಕ 'ಮನ್ವಿತ್'ಗೆ ಅತ್ಯುತ್ತಮ ನಟ ಪ್ರಶಸ್ತಿ ದೊರೆತಿದೆ.**

ಉತ್ತರ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ(ರಿ)ವತಿಯಿಂದ ಧಾರವಾಡದ ಆಲೂರ ವೆಂಕಟರಾಯರ ಭವನದಲ್ಲಿ ನಡೆದ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ-2026ರಲ್ಲಿ ಮಹಾಂತೇಶ ಹಳ್ಳೂರ ಅವರ ಕಥೆ ಆಧಾರಿತ ಗುರುದತ್ ಮುಸುರಿ ನಿರ್ದೇಶನದ 'ಡೆತ್ ಸರ್ಟಿಫಿಕೆಟ್' ಚಿತ್ರದಲ್ಲಿನ ನಾಯಕ ಪಾತ್ರದ ಅಭಿನಯಕ್ಕಾಗಿ 'ಅತ್ಯುತ್ತಮ ನಟ' ಪ್ರಶಸ್ತಿ ದೊರೆತಿದೆ. ಹಿರಿಯ ನಟ, ಪರಿಸರವಾದಿ, ಜೀವಮಾನ ಸಾಧನೆ ಪುರಸ್ಕೃತ ಸುರೇಶ ಹೆಬ್ಳೀಕರ, ನಿರ್ದೇಶಕ ನಟ ಅನಿರುದ್ಧ ಜತ್ಕರ್, ಗ್ಯಾರಂಟಿ ನ್ಯೂಜ್‌ನ ರಾಧಾ ಹಿರೇಗೌಡರ, ನ್ಯೂಜೋ ನ್ಯೂಜ್‌ನ ಹರೀಶ ನಾಗರಾಜು ಉಪಸ್ಥಿತಿಯಲ್ಲಿ ಪ್ರಶಸ್ತಿಯನ್ನು ಹಿರಿಯ ಚಲನಚಿತ್ರ ನಟಿ ಭವ್ಯ, ಹ್ಯಾಟ್ರಿಕ್ ನಿರ್ದೇಶಕ ನಾಗೇಂದ್ರ ಮಾಗಡಿ ಪ್ರಶಸ್ತಿ ಪತ್ರದೊಂದಿಗೆ ನೆನಪಿನ ಕಾಣಿಕೆ ನೀಡಿ ಗೌರವಿಸಿದರು. ವೇದಿಕೆಯಲ್ಲಿ ಉ.ಕ.ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷ ಮಂಜುನಾಥ ಹಗೇದಾರ, ಕಾರ್ಯಾಧ್ಯಕ್ಷ ಡಾ.ಕಲ್ಮೇಶ ಹಾವೇರಿಪೇಟ, ಪ್ರಧಾನ ಕಾರ್ಯದರ್ಶಿ ರಾಹುಲ್ ದತ್ತಪ್ರಸಾದ, ಉಪಾಧ್ಯಕ್ಷ ಪ್ರಭು ಹಂಚಿನಾಳ, ಸಲಹಾ ಸಮಿತಿ ಸದಸ್ಯ, ಚಲನಚಿತ್ರ ಪತ್ರಕರ್ತ ಡಾ.ಪ್ರಭು ಗಂಜಿಹಾಳ ಮತ್ತು ಮಂಡಳಿಯ ಪದಾಧಿಕಾರಿಗಳು, 'ಡೆತ್ ಸರ್ಟಿಫಿಕೇಟ್' ಚಿತ್ರದ ಕಥೆಗಾರ ಮಹಾಂತೇಶ ಹಳ್ಳೂರ, ನಿರ್ದೇಶಕ ಗುರುದತ್ ಮುಸುರಿ, ಹಿರಿಯ ಹೋರಾಟಗಾರರು, ನ್ಯಾಯವಾದಿ ಬಿ.ಡಿ.ಹಿರೇಮಠ ಉಪಸ್ಥಿತರಿದ್ದರು.




ಇದೀಗ ಉತ್ತರ ಕರ್ನಾಟಕದ ಬಾಗಲಕೋಟೆ ಜಿಲ್ಲೆಯಲ್ಲಿ ಚಿತ್ರೀಕರಣವಾದ "ಡೆತ್ ಸರ್ಟಿಫಿಕೇಟ್" ಚಲನಚಿತ್ರಕ್ಕೆ 'ಅತ್ಯುತ್ತಮ ನಟ' ಪ್ರಶಸ್ತಿ ದೊರೆತಿದ್ದಕ್ಕೆ ಮನ್ವಿತ್ ಖುಷಿಯಾಗಿದ್ದಾರೆ. ಸಧ್ಯದಲ್ಲೆ "ಧ್ರುವನಕ್ಷತ್ರ" ಕನ್ನಡ ಚಲನಚಿತ್ರ ಮತ್ತು "ಕೊಪ್ಪಂ" ಎಂಬ ತಮಿಳು ಚಲನಚಿತ್ರದಲ್ಲಿಯೂ ನಾಯಕ ನಟನಾಗಿ ನಟಿಸಿದ್ದು ಅವೆರಡೂ ಕೂಡಾ ಬಿಡುಗಡೆಗೆ ಸಿದ್ಧವಾಗಿದ್ದು ಅವರಿಗೆ ತಮ್ಮ ಅಭಿನಯದಲ್ಲಿ ಹೆಚ್ಚಿನ ಭರವಸೆ ಹುಟ್ಟುಹಾಕಿದೆ. ಪ್ರಶಸ್ತಿ ಪಡೆದದ್ದಕ್ಕೆ 'ಡೆತ್ ಸರ್ಟಿಫಿಕೇಟ್' ಚಿತ್ರ ತಂಡ ಇವರನ್ನು ಅಭಿನಂದಿಸಿದೆ.

## ದೇಶದ ಏಕತೆ, ಸಾಮಾಜಿಕ ನ್ಯಾಯಕ್ಕಾಗಿ ಕಟೂರಿ ವೆಂಕಟೇಶ್ವರಲು ಅವರ ಪಾದಯಾತ್ರೆ: ರವಿ ಬೋಸರಾಜ್

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ದೇಶದ ಏಕತೆ, ಸಾಮಾಜಿಕ ನ್ಯಾಯ, ಸರ್ವಾಂಗೀಣ ಅಭಿವೃದ್ಧಿ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ರಕ್ಷಣೆಗಾಗಿ ಕಾಂಗ್ರೆಸ್ ನಾಯಕ ಶ್ರೀ ರಾಹುಲ್ ಗಾಂಧಿ ಅವರು ದೇಶದ ಪ್ರಧಾನಿಯಾಗಬೇಕು ಎಂಬ ಆಶಯದೊಂದಿಗೆ ಕನ್ಯಾಕುಮಾರಿಯಿಂದ ಜಮ್ಮು-ಕಾಶ್ಮೀರದವರೆಗೆ ಪಾದಯಾತ್ರೆ ಕೈಗೊಂಡಿರುವ ಆಂಧ್ರಪ್ರದೇಶ ಮೂಲದ ಶ್ರೀ ಕಟೂರಿ ವೆಂಕಟೇಶ್ವರಲು ಅವರನ್ನು ರಾಯಚೂರಿನ ಸರ್ಕಿಟ್ ಹೌಸ್‌ನಲ್ಲಿ ಕಾಂಗ್ರೆಸ್ ಮುಖಂಡ ಶ್ರೀ ರವಿ ಬೋಸರಾಜ್ ಅವರು ಭೇಟಿ ಮಾಡಿ ಆತ್ಮೀಯವಾಗಿ ಮಾತುಕತೆ ನಡೆಸಿದರು.**

ಈ ಸಂದರ್ಭದಲ್ಲಿ ಕಟೂರಿ ವೆಂಕಟೇಶ್ವರಲು ಅವರ 68 ದಿನಗಳ ಪಾದಯಾತ್ರೆಯ ಅನುಭವ, ಉದ್ದೇಶ, ಜನರಿಂದ ದೊರೆಯುತ್ತಿರುವ ಸ್ಪಂದನೆ ಹಾಗೂ ಮುಂದಿನ ಪ್ರಯಾಣದ ಯೋಜನೆಗಳ ಕುರಿತು ವಿವರವಾಗಿ ಚರ್ಚಿಸಲಾಯಿತು. ದೇಶದ ವಿವಿಧ ರಾಜ್ಯಗಳು ಹಾಗೂ ಗ್ರಾಮೀಣ ಪ್ರದೇಶಗಳ ಮೂಲಕ ಕಾಲ್ನಡಿಗೆಯಲ್ಲಿ ಸಾಗುತ್ತಿರುವ ಅವರು, ದಾರಿಯುದ್ದಕ್ಕೂ ಸಾರ್ವಜನಿಕರನ್ನು ಭೇಟಿಯಾಗಿ ತಮ್ಮ ಆಶಯವನ್ನು ಹಂಚಿಕೊಳ್ಳುತ್ತಿರುವುದು ಗಮನಾರ್ಹವಾಗಿದೆ.

ದೇಶದ ವೈವಿಧ್ಯತೆಯಲ್ಲಿ ಏಕತೆಯನ್ನು ಮತ್ತಷ್ಟು ಬಲಪಡಿಸುವುದು, ಸಾಮಾಜಿಕ ನ್ಯಾಯದ ಪರವಾಗಿ ಧ್ವನಿ ಎತ್ತುವುದು ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಕೈಗೊಂಡಿರುವ ಈ ಪಾದಯಾತ್ರೆಯ ಸಂಕಲ್ಪಕ್ಕೆ ರವಿ ಬಸವರಾಜ್ ಮೆಚ್ಚುಗೆ ವ್ಯಕ್ತಪಡಿಸಿದರು. ಕನ್ಯಾಕುಮಾರಿಯಿಂದ ಜಮ್ಮು-ಕಾಶ್ಮೀರದವರೆಗೆ



ಸಾವಿರಾರು ಕಿಲೋಮೀಟರ್‌ಗಳಷ್ಟು ದೂರವನ್ನು ಕಾಲ್ನಡಿಗೆಯಲ್ಲಿ ಕ್ರಮಿಸುವುದು ಸುಲಭದ ಕಾರ್ಯವಲ್ಲ. ದೈಹಿಕ ಶ್ರಮ, ಸಮಯ ಹಾಗೂ ಹಲವು ಸವಾಲುಗಳ ನಡುವೆಯೂ ತಮ್ಮ ಆಶಯವನ್ನು ಮುಂದಿಟ್ಟುಕೊಂಡು ಮುನ್ನಡೆಯುತ್ತಿರುವ ವೆಂಕಟೇಶ್ವರಲು ಅವರ ದೃಢನಿಶ್ಚಯ ಮತ್ತು ಬದ್ಧತೆ ಶ್ಲಾಘನೀಯವಾಗಿದೆ ಎಂದು ಅವರು ಹೇಳಿದರು.

ಈ ಪಾದಯಾತ್ರೆ ಕೇವಲ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಸಾಗುವ ಪ್ರಯಾಣವಾಗದೆ, ದೇಶದ ಜನರೊಂದಿಗೆ ಸಂವಾದ ನಡೆಸುವ, ಅವರ ಭಾವನೆಗಳನ್ನು ಅರಿಯುವ ಹಾಗೂ ಏಕತೆ ಮತ್ತು ಪ್ರಜಾಪ್ರಭುತ್ವದ ಸಂದೇಶವನ್ನು ಹಂಚಿಕೊಳ್ಳುವ ಪ್ರಯತ್ನವಾಗಲಿ ಎಂದು ಆಶಿಸಲಾಯಿತು.

ಈ ಸಂದರ್ಭದಲ್ಲಿ ರವಿ ಬೋಸರಾಜ್ ಅವರು ಕಟೂರಿ ವೆಂಕಟೇಶ್ವರಲು ಅವರ ಸಂಕಲ್ಪಕ್ಕೆ ಗೌರವ ಸಲ್ಲಿಸಿ, "ನಿಮ್ಮ ಪಾದಯಾತ್ರೆ ಯಶಸ್ವಿಯಾಗಿ ಪೂರ್ಣಗೊಳ್ಳಲಿ. ನಿಮ್ಮ ಮುಂದಿನ ಪ್ರಯಾಣ ಸುಗಮವಾಗಿರಲಿ. ಯಾವುದೇ ಅಡೆತಡೆಗಳಿಲ್ಲದೆ ಜಮ್ಮು-ಕಾಶ್ಮೀರ ತಲುಪಿ ನಿಮ್ಮ ಉದ್ದೇಶವನ್ನು ಯಶಸ್ವಿಯಾಗಿ ಸಾಧಿಸಲಿ" ಎಂದು ಹೃತ್ಪೂರ್ವಕ ಶುಭ ಹಾರೈಸಿದರು.

ಮುಂದಿನ ದಿನಗಳಲ್ಲಿಯೂ ದೇಶದ ಏಕತೆ, ಸಹೋದರತ್ವ, ಸಾಮಾಜಿಕ ನ್ಯಾಯ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ಪರವಾಗಿ ಜನರಲ್ಲಿ ಜಾಗೃತಿ ಮೂಡಿಸುವ ಅವರ ಪ್ರಯತ್ನಕ್ಕೆ ಯಶಸ್ಸು ದೊರೆಯಲಿ ಎಂದು ಹಾರೈಸಲಾಯಿತು.

## ನೇಮಕಾತಿ ಪ್ರಕಟಣೆ

**KFD ನೇಮಕಾತಿ 2026 – 750 ಅರಣ್ಯ ವೀಕ್ಷಕ (Forest Observer) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ 30 ಜುಲೈ 2026**

KFD ನೇಮಕಾತಿ 2026: 750 ಅರಣ್ಯ ವೀಕ್ಷಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಅರಣ್ಯ ಇಲಾಖೆಯು ಜುಲೈ 2026ರ ಅಧಿಕೃತ ಅಧಿಸೂಚನೆಯ ಮೂಲಕ ಅರಣ್ಯ ವೀಕ್ಷಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 31–ಆಗಸ್ಟ್–2026 ರೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: aranya.gov.in

## ಸ್ತನ್ಯಪಾನ ಸಪ್ತಾಹದ ಅಂಗವಾಗಿ ಜಾಗೃತಿ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ಇನ್ನರ್ ವೀಲ್ ಕ್ಲಬ್ ಕುಷ್ಟಗಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಮಾರುತಿನಗರದ ಅಂಗನವಾಡಿ ಕೇಂದ್ರದಲ್ಲಿ ಸ್ತನ್ಯಪಾನ ಸಪ್ತಾಹದ ಅಂಗವಾಗಿ ಗರ್ಭಿಣಿ ಹಾಗೂ ಪ್ರಸೂತಿ ಮಹಿಳೆಯರಿಗೆ ಸ್ತನ್ಯಪಾನದ ಮಹತ್ವ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.**




ಕಾರ್ಯಕ್ರಮದಲ್ಲಿ ಇನ್ನರ್ ವೀಲ್ ಜಿಲ್ಲಾ ಕಾರ್ಯದರ್ಶಿ ಡಾ. ಪಾರ್ವತಿ ಪೋಳೋಟಿ ಮಾತನಾಡಿ, ತಾಯಿಯ ಹಾಲಿನಲ್ಲಿರುವ ಪೌಷ್ಟಿಕಾಂಶ, ಉತ್ತಮ ಸ್ತನ್ಯಪಾನಕ್ಕೆ ಅಗತ್ಯವಾದ ಅಂಶಗಳು ಹಾಗೂ ಬಾಣಂತಿಯರು ಸೇವಿಸಬೇಕಾದ ಪೌಷ್ಟಿಕ ಆಹಾರದ ಕುರಿತು ಮಾಹಿತಿ ನೀಡಿದರು. ತಾಯಿ ಮತ್ತು ಮಗುವಿನ ಆರೋಗ್ಯಕ್ಕೆ ಪ್ರೋಟೀನ್ ಹಾಗೂ ಕಬ್ಬಿಣಾಂಶಯುಕ್ತ ಆಹಾರದ ಮಹತ್ವವನ್ನು ವಿವರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಲ್ಲಮ್ಮ ಅವರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಕಾರ್ಯವೈಖರಿ ಹಾಗೂ ವಿವಿಧ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು. ಇನ್ನರ್ ವೀಲ್ ಕ್ಲಬ್ ಕುಷ್ಟಗಿ ಅಧ್ಯಕ್ಷೆ ಗೌರಮ್ಮ ಕೂಡತನಿ ಮಾತನಾಡಿ, "ಕಳೆದ ಒಂಬತ್ತು ವರ್ಷಗಳಿಂದ ಕ್ಲಬ್ ವತಿಯಿಂದ ಸ್ತನ್ಯಪಾನ ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿದ್ದು, ತಾಯಿ ಮತ್ತು ಮಗುವಿನ ಆರೋಗ್ಯದ ಕುರಿತು ಅರಿವು ಮೂಡಿಸುವ ಸೇವಾ ಕಾರ್ಯದಲ್ಲಿ ತೊಡಗಿರುವುದು ಹೆಮ್ಮೆಯ ಸಂಗತಿ" ಎಂದರು. ಶಾರದಾ ಶೆಟ್ಟರ್ ಮಾತನಾಡಿ, ಪ್ರತಿಯೊಬ್ಬ ತಾಯಿಯೂ ಸ್ತನ್ಯಪಾನದ ಮಹತ್ವ ಅರಿತುಕೊಂಡು ಇಂತಹ ಜಾಗೃತಿ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕ್ಲಬ್ ಕಾರ್ಯದರ್ಶಿ ಶ್ರೀದೇವಿ ಮಸ್ಕಿಟಾಯಿಟೆ ಸೇರಿದಂತೆ ಕ್ಲಬ್ ಸದಸ್ಯರು ಹಾಗೂ ಅಂಗನವಾಡಿ ಸಿಬ್ಬಂದಿ ಉಪಸ್ಥಿತರಿದ್ದರು. ಗರ್ಭಿಣಿ ಹಾಗೂ ಪ್ರಸೂತಿ ಮಹಿಳೆಯರಿಗೆ ಪ್ರೋಟೀನ್ ಲ್ಯಾಕ್ಟೇಶನ್ ಪೌಡರ್ ಮತ್ತು ಕಬ್ಬಿಣದ ಟಾನಿಕ್‌ಗಳನ್ನು ವಿತರಿಸಲಾಯಿತು. "ಉತ್ತಮ ಸ್ತನ್ಯಪಾನ?ಆರೋಗ್ಯಕರ ತಾಯಿ, ಆರೋಗ್ಯಕರ ಮಗು" ಎಂಬ ಸಂದೇಶದೊಂದಿಗೆ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

## ಬಾಲಾ ಬ್ಯಾಡ್ಮಿಂಟನ್: ವಿದ್ಯಾರ್ಥಿನಿಯರು ಸತತ ನಾಲ್ಕನೇ ಬಾರಿ ವಿಭಾಗ ಮಟ್ಟಕ್ಕೆ ಆಯ್ಕೆ,ಅಭಿನಂದನೆ

❑ ನೈಜ್ಯ ದೆಸೆ ನ್ಯೂಸ್

**ಹಾಲಾಪೂರ: ಗ್ರಾಮದಲ್ಲಿರುವ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು ಸತತವಾಗಿ ನಾಲ್ಕನೇ ಬಾರಿಗೆ ವಿದ್ಯಾರ್ಥಿನಿಯರು ಬಾಲ್ ಬ್ಯಾಡ್ಮಿಂಟನ್ ಆಟದಲ್ಲಿ ಗೆದ್ದು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ,ಗ್ರಾಮೀಣ**



**ಪ್ರದೇಶದಲ್ಲಿ ಇರುವಂತಹ ಶಾಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಆಟ ಆಡಿದ ಪ್ರಯುಕ್ತ ನಮ್ಮ ಹಾಲಾಪೂರ ಶಾಲೆಯು ಇಂದು ಜಿಲ್ಲೆಯಲ್ಲಿ ಹೆಸರನ್ನು ಪಡೆದಿದ್ದು ಕೀರ್ತಿಗೆ ಪಾತ್ರವಾಗಿದ್ದು ಹೆಮ್ಮೆಯ ವಿಚಾರ ಎಂದು ದೈಹಿಕ ಶಿಕ್ಷಕರಾದ ರವೀಂದ್ರ ಕುಂಬಾರ ಬಹಳಷ್ಟು ಹರ್ಷ ವ್ಯಕ್ತಪಡಿಸಿದರು. ಕ್ರೀಡೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಾದ ಸೊಫಿಯಾ,ಅಮೃತ, ಪ್ರಿಯಾಂಕ,ರೇಣುಕಾ, ಶಿವಾನಿ ಈ ಎಲ್ಲಾ ವಿದ್ಯಾರ್ಥಿಗಳು ಉತ್ತಮ ಜೊತೆಯಾಟದಿಂದ ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದು ಸಂತೋಷ ಎಂದು ತಿಳಿಸಿದರು.ಈ ವಿದ್ಯಾರ್ಥಿಗಳ ಸಾಧನೆಗೆ ಎಸ್ ಡಿ ಎಮ್ ಸಿ ಅದ್ಯಕ್ಷರು, ಸರ್ವಸದಸ್ಯರು ಹಾಗೂ ಸುಭಾಷ್ ಸಿಂಗ್ ಮುಖ್ಯ ಶಿಕ್ಷಕರು, ಶಿಕ್ಷಕವೃಂದ,ಹಳೆಯ ವಿದ್ಯಾರ್ಥಿಗಳ ಸಂಘದ ಪದಾಧಿಕಾರಿಗಳು, ಊರಿನ ಶಿಕ್ಷಣ ಪ್ರೇಮಿಗಳು,ಕ್ರೀಡಾಭಿಮಾನಿಗಳು ವಿದ್ಯಾರ್ಥಿಗಳಿಗೆ ಅಭಿನಂದನೆಗಳನ್ನು ತಿಳಿಸಿದ್ದಾರೆ.**

# ಪ್ರಿಯಾಂಕ್ ಖರ್ಗೆಯವರಿಗೆ ಗೃಹ ಸಚಿವರಾಗಲು ಯೋಗ್ಯತೆ ಇಲ್ಲ : ಚಲುವಾದಿ ನಾರಾಯಣಸ್ವಾಮಿ

**ಲಿಂಗಸಗೂರು: ಪ್ರಸುತ್ತ ರಾಜ್ಯದಲ್ಲಿರುವ ಗೃಹಸಚಿವರಾದ ಪ್ರಿಯಾಂಕ್ ಖರ್ಗೆ ಗೃಹ ಸಚಿವರಾಗಲು ಅವರಲ್ಲಿ ಯೋಗ್ಯತೆ ಇಲ್ಲ ಅವರನ್ನು ಆರ್‌ಎಸ್‌ಎಸ್ ನ ಮಂತ್ರಿಯನ್ನಾಗಿ ಮಾಡಿ, ಎಂದು ವಿರೋಧ ಪಕ್ಷದ ವಿಪಕ್ಷ ನಾಯಕ ಚಲುವಾದಿ ನಾರಾಯಣಸ್ವಾಮಿ ಹೇಳಿದರು.**



ಅವರಿಂದು ಕರಡಕಲ್ ಗ್ರಾಮದ ರಾಣೆಮ್ಮ ಕುಟುಂಬದವರ ಮನೆಗೆ ಬೇಟಿ ಸಾಂತ್ವನ ಹೇಳಿದ ನಂತರ ಮಾತನಾಡಿದ ಅವರು, ರಾಜ್ಯದಲ್ಲಿ ದಲಿತರ ಸರಣಿ ಕೊಲೆಗಳಾಗುತ್ತಿದ್ದರು ಯಾವುದೇ ಕ್ರಮ ಕೈಗೊಳ್ಳುವಲ್ಲಿ ವಿಫಲರಾಗಿದ್ದಾರೆ. ಅಲ್ಲದೇ ಜಿಲ್ಲೆ ಮತ್ತು ರಾಜ್ಯದಲ್ಲಿ ಡ್ರಗ್ಸ್ ಹಾಗೂ ಗಾಂಜಾಕ್ಕೆ ಯುವಕರು ಬಲಿಯಾಗುತ್ತಿದ್ದಾರೆ. ಕುಟುಂಬಗಳ ನಾಶವಾಗುತ್ತಿವೆ. ಇದನ್ನು ನಿಭಾಯಿಸುವಲ್ಲಿ ಗೃಹ ಸಚಿವರು ವಿಫಲರಾಗಿದ್ದಾರೆ. ಆದ್ದರಿಂದ ಮುಖ್ಯ ಮಂತ್ರಿಗಳು ಒಳ್ಳೆಯವರನ್ನು ಗೃಹ ಸಚಿವರನ್ನಾಗಿ ಮಾಡಲಿ ಎಂದರು.ಕಲ್ಯಾಣ ಕರ್ನಾಟಕ ಭಾಗದ ರಾಯಚೂರು ಜಿಲ್ಲೆಯಲ್ಲಿ ಕಳೆದ 15 ದಿನಗಳಲ್ಲಿ ಒಬ್ಬ ದಲಿತ ಯುವಕನ ಕೊಲೆ ಹಾಗೂ ಇಬ್ಬರು ಮಹಿಳೆಯರ ಅತ್ಯಾಚಾರ ಕೊಲೆಯಾಗಿರುವುದರ ಬಗ್ಗೆ ಸದನದಲ್ಲಿ ಚರ್ಚೆಯಾಗಬೇಕಾಗಿತ್ತು.

ಆದರೆ 2 ದಿನಗಳ ಮುಂಚೆಯೇ ಸದನವನ್ನು ಮೊಟಕುಗೊಳಿಸಿ ಕಾಂಗ್ರೆಸ್ ನಾಯಕರು ಕಾಣದಂತೆ ಮಾಯವಾಗಿದ್ದಾರೆ. ಇದರಿಂದಾಗಿ ಸದನದಲ್ಲಿ ಈ ವಿಷಯ ಚರ್ಚಿಸಲು ಸಾಧ್ಯವಾಗಿಲ್ಲ. ಆದ್ದರಿಂದ ಆ ಕುಟುಂಬಗಳಿಗೆ ಸಾಂತ್ವಾನ ಹೇಳಲು ಇಂದು ಕರಡಕಲ್ ಗ್ರಾಮದ ರಾಣೆಮ್ಮನ ಮನೆಗೆ ಭೇಟಿ ನೀಡಿ ಅವರ ಕುಟುಂಬಕ್ಕೆ ಸಾಂತ್ವಾನ ಹೇಳಲಾಯಿತು. ಸರ್ಕಾರದಿಂದ ಕೂಡಲೇ ಈ ಕುಟುಂಬಕ್ಕೆ 2 ಎಕರೆ ಜಮೀನು, ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ನೌಕರಿ ನೀಡಬೇಕೆಂದು ಸರ್ಕಾರದ ಮೇಲೆ ಒತ್ತಡ ಹಾಕುತ್ತೇನೆ.ದಲಿತರ ಕಗ್ಗೋಲೆಗಳು ನಡೆಯುತ್ತಿದ್ದರೂ ಸರ್ಕಾರದ ಯಾವೊಬ್ಬ ಮಂತ್ರಿಯಾಗಲಿ ಸರ್ಕಾರವಾಗಲಿ ಅನ್ಯಾಯವಾದ ಕುಟುಂಬಗಳಿಗೆ ಭೇಟಿ ನೀಡುವ ಸೌಜನ್ಯತೆ ಸರ್ಕಾರಕ್ಕಿಲ್ಲವಾಗಿದೆ.

ಇನ್ನು ಉಪ ವಿಭಾಗದ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಪೋಸ್ಟ್‌ಮನ್ ಕೆಲಸ ಮಾಡುತ್ತಿದ್ದಾರೆ. ವಸ್ತುಸ್ಥಿತಿಯ ಬಗ್ಗೆ ವರದಿಯನ್ನು ತಯಾರಿಸಲು ಅವರಿಂದ ಸಾಧ್ಯವಾಗಿಲ್ಲ ಎಂದು ಆರೋಪಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ, ಜಿಲ್ಲಾ ಕಾರ್ಯದರ್ಶಿ ರವೀಂದ್ರ ಜಲ್ದಾರ್, ಆರ್. ರುದ್ರಯ್ಯ, ನಾಗಭೂಷಣ್, ಜಗನ್ನಾಥ ಹಾಗೂ ಗ್ರಾಮಸ್ಥರು ಸೇರಿದಂತೆ ಇದ್ದರು.

# ದಲಿತರ ಹತ್ಯಾಚಾರ ತಡೆಯಲು ಕಠಿಣ ಕ್ರಮಕ್ಕೆ ಸಿಪಿಐ(ಎಂಎಲ್) ರೆಡ್‌ಸ್ಟಾರ್ ಆಗ್ರಹ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ರಾಯಚೂರು ಜಿಲ್ಲೆಯಲ್ಲಿ ದಲಿತರು ಹಾಗೂ ದಲಿತ ಮಹಿಳೆಯರ ಮೇಲೆ ನಡೆಯುತ್ತಿರುವ ಕೊಲೆ, ಅತ್ಯಾಚಾರ ಮತ್ತು ದೌರ್ಜನ್ಯ ಪ್ರಕರಣಗಳನ್ನು ತಡೆಯಲು ಸರ್ಕಾರ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಸಿಪಿಐ(ಎಂಎಲ್) ರೆಡ್‌ಸ್ಟಾರ್ ತಾಲೂಕ ಕಾರ್ಯದರ್ಶಿ ತಿಪ್ಪರಾಜು ಸಹಾಯಕ ಆಯುಕ್ತರ ಮೂಲಕ ಗೃಹ ಸಚಿವರಿಗೆ ಮನವಿ ಸಲ್ಲಿಸಿದರು.**

ಜಿಲ್ಲೆಯಲ್ಲಿ ನಡೆದಿರುವ ಭೂಮಾನಂದ, ಸಿರವಾರ ತಾಲೂಕಿನ ವಕ್ರಾಣಿ ಗ್ರಾಮದ ಅಶ್ವಿನಿ ಹಾಗೂ ಲಿಂಗಸಗೂರು ತಾಲೂಕಿನ ಕರಡಕಲ್ ಗ್ರಾಮದ ರಾಣೆಮ್ಮ ಕೊಲೆಅತ್ಯಾಚಾರ ಪ್ರಕರಣಗಳ ಎಲ್ಲ ಆರೋಪಿಗಳನ್ನು ಬಂಧಿಸಿ, ನಿಷ್ಪಕ್ಷಪಾತ ಹಾಗೂ ಉನ್ನತ ಮಟ್ಟದ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಲಾಯಿತು.

ಈ ಮೂರು ಸಂತ್ರಸ್ತ ಕುಟುಂಬಗಳ ಪರಿಸ್ಥಿತಿಯನ್ನು ಪರಿಗಣಿಸಿ ರಾಜ್ಯ ಸರ್ಕಾರ ತಲಾ 1 ಕೋಟಿ ಪರಿಹಾರ ನೀಡಬೇಕು. ಸಂತ್ರಸ್ತ ಕುಟುಂಬಗಳಿಗೆ ಸೂಕ್ತ ಭದ್ರತೆ ಹಾಗೂ ಪುನರ್ವಸತಿ ಕಲ್ಪಿಸಬೇಕು. ಜಾತಿ ತಾರತಮ್ಯ ಮತ್ತು ಅಸ್ಪೃಶ್ಯತೆ ವಿರುದ್ದ ಸರ್ಕಾರಗಳು ಕಠಿಣ ಕ್ರಮ ಕೈಗೊಳ್ಳುವಲ್ಲಿ ವಿಫಲವಾಗಿವೆ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಸಮಾಜದಲ್ಲಿ ಜಾತಿ ಆಧಾರಿತ ತಾರತಮ್ಯ, ಅಸ್ಪೃಶ್ಯತೆ ಮತ್ತು ದಲಿತರ ಮೇಲಿನ ದೌರ್ಜನ್ಯಗಳಿಗೆ ಕಡಿವಾಣ ಹಾಕಲು ಪೊಲೀಸ್ ಹಾಗೂ ತನಿಖಾ ವ್ಯವಸ್ಥೆಯಲ್ಲಿ ಗಣನೀಯ ಬದಲಾವಣೆ ತರಬೇಕಿದೆ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಪ್ರಕರಣ ದಾಖಲಿಸುವುದು, ತನಿಖೆ ನಡೆಸುವುದು, ಆರೋಪಪಟ್ಟಿ ಸಲ್ಲಿಸುವುದು ಹಾಗೂ




ನ್ಯಾಯಾಲಯದಲ್ಲಿ ವಿಚಾರಣೆ ನಡೆಸುವ ಪ್ರಕ್ರಿಯೆ ಪರಿಣಾಮ ಕಾರಿಯಾಗಬೇಕು.

ಆರೋಪಿಗಳು ಕಾನೂನಿನ ಲೋಪದೋಷಗಳ ಲಾಭ ಪಡೆದು ತಪ್ಪಿಸಿ ಕೊಳ್ಳದಂತೆ ವಿಶೇಷ ನಿಗಾ ವಹಿಸಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಆದೇಶ ನಗನೂರು, ರಸೀದ್ ಜಮಾದಾರ್, ಬಸವರಾಜ ಬಡಿಗೇರ, ಬಸವರಾಜ ಹಿರೇಹೆಸರೂರು, ಚಿದಾನಂದ ರಮೇಶ, ಹನುಮೇಶ, ಕಸಬಾಲಿಂಗಸುಗೂರ, ಗೌತಮ್ ಗೆಜ್ಜಲಗಟ್ಟಾ, ರಾಮಣ್ಣ ಕರ್ಣಾಟಗಿ, ನಸೀರಿನಾ ಬೇಗಂ ಸೇರಿ ಇತರರು ಇದ್ದರು.

# ವಿದ್ಯಾಗಿರಿಗೆ ಸಮರ್ಪಕ ಸಾರಿಗೆ ವ್ಯವಸ್ಥೆಗೆ ಆಗ್ರಹ: ಎಸ್‌ಎಫ್‌ಐ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ

❑ ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ಪಟ್ಟಣದ ರಾಯಚೂರು ರಸ್ತೆಯಲ್ಲಿರುವ ವಿದ್ಯಾಗಿರಿ ಪ್ರದೇಶದ ಶಿಕ್ಷಣ ಸಂಸ್ಥೆಗಳು ಹಾಗೂ ವಿದ್ಯಾರ್ಥಿ ವಸತಿ ನಿಲಯಗಳಿಗೆ ತೆರಳುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸಮರ್ಪಕ ಬಸ್‌ಸೌಲಭ್ಯ, ಬಸ್ ನಿಲುಗಡೆ ಹಾಗೂ ಮೂಲಸೌಕರ್ಯ ಕಲ್ಪಿಸುವಂತೆ ಆಗ್ರಹಿಸಿ ಎಸ್‌ಎಫ್‌ಐ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.**

ವಿದ್ಯಾಗಿರಿ ಪ್ರದೇಶದಲ್ಲಿ 8ಕ್ಕೂ ಹೆಚ್ಚು ವಿದ್ಯಾರ್ಥಿ ವಸತಿ ನಿಲಯಗಳು, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಸೇರಿದಂತೆ ಹಲವು ಶಿಕ್ಷಣ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರತಿನಿತ್ಯ ಸುಮಾರು 2,000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ಆದರೆ ವಸತಿ ನಿಲಯಗಳಿಂದ ಮುಖ್ಯ ರಸ್ತೆಯವರೆಗೆ ಸುಮಾರು 4 ಕಿ.ಮೀ.ವರೆಗೆ ಕಾಲ್ನಡಿಗೆಯಲ್ಲಿ ತೆರಳಿ ಬಸ್‌ಗಳನ್ನು ಅವಲಂಬಿಸಬೇಕಾದ ಪರಿಸ್ಥಿತಿ ಇದೆ ಎಂದು ಎಸ್‌ಎಫ್‌ಐ ಜಿಲ್ಲಾ ಉಪಾಧ್ಯಕ್ಷ ಮಹಾಲಿಂಗ ದೊಡ್ಡಮನಿ ಹೇಳಿದರು.

ರಾಯಚೂರು ಮುಖ್ಯ ರಸ್ತೆಯ ಸಮೀಪದಲ್ಲೇ ವಿದ್ಯಾಗಿರಿ ಪ್ರದೇಶವಿದ್ದರೂ, ಈ ಮಾರ್ಗದಲ್ಲಿ ಸಂಚರಿಸುವ ಬಹುತೇಕ ಬಸ್‌ಗಳು ವಿದ್ಯಾರ್ಥಿಗಳಿಗಾಗಿ ನಿಲುಗಡೆ ಮಾಡುತ್ತಿಲ್ಲ. ಬೆರಳೆಣಿಕೆಯಷ್ಟು ಬಸ್‌ಗಳು ಮಾತ್ರ ನಿಲ್ಲುವುದರಿಂದ ವಿದ್ಯಾರ್ಥಿಗಳು ಬಿಸಿಲು, ಮಳೆ ಸೇರಿದಂತೆ ಪ್ರತಿಕೂಲ ಹವಾಮಾನದಲ್ಲೂ ತೊಂದರೆ ಅನುಭವಿಸುವಂತಾಗಿದೆ. ಇದರಿಂದ ವಿದ್ಯಾರ್ಥಿಗಳ ಅಮೂಲ್ಯ ಸಮಯವೂ ವ್ಯರ್ಥವಾಗುತ್ತಿದೆ ಎಂದು ಅವರು ಆರೋಪಿಸಿದರು.

ಹಲವು ಬಾರಿ ಸಂಬಂಧಿಸಿದ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಸಮಸ್ಯೆ



ಬಗೆಹರಿದಿಲ್ಲ. ವಿದ್ಯಾರ್ಥಿಗಳ ಬೇಡಿಕೆಗಳನ್ನು ನಿರ್ಲಕ್ಷಿಸಿದರೆ ಮುಂದಿನ ದಿನಗಳಲ್ಲಿ ಡಿಪೋ ಮುತ್ತಿಗೆ ಹಾಕಿ ಹೋರಾಟ ನಡೆಸಬೇಕಾಗುತ್ತದೆ ಎಂದು ಮಹಾಲಿಂಗ ದೊಡ್ಡಮನಿ ಎಚ್ಚರಿಸಿದರು. ಎಸ್‌ಎಫ್‌ಐ ತಾಲೂಕು ಖಜಾಂಚಿ ದಿಲ್‌ಶಾದ್ ಮಾತನಾಡಿ, ವಿದ್ಯಾರ್ಥಿಗಳ ಶಿಕ್ಷಣ ಮತ್ತು ಸುರಕ್ಷತೆಯ ದೃಷ್ಟಿಯಿಂದ ವಿದ್ಯಾಗಿರಿ ಪ್ರದೇಶದ ಸಮೀಪದಲ್ಲಿ ಈ ಮಾರ್ಗದಲ್ಲಿ ಸಂಚರಿಸುವ ಎಲ್ಲಾ ಕೆಎಸ್‌ಆರ್‌ಟಿಸಿ ಹಾಗೂ ಇತರೆ ಬಸ್‌ಗಳಿಗೆ ಕಡ್ಡಾಯ ನಿಲುಗಡೆ ಕಲ್ಪಿಸಬೇಕು. ವಿದ್ಯಾರ್ಥಿಗಳಿಗಾಗಿ ಪ್ರತ್ಯೇಕ ಬಸ್‌ಗಳ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ವಿದ್ಯಾಗಿರಿ ರಸ್ತೆಯ ಎರಡೂ ಬದಿಗಳಲ್ಲಿ ಬಸ್ ನಿಲ್ದಾಣ ನಿರ್ಮಾಣಕ್ಕೆ ಆರಂಭಿಕ ಕಾಮಗಾರಿ ನಡೆದಿದ್ದರೂ, ಕಾಮಗಾರಿ ಪೂರ್ಣಗೊಳ್ಳದೆ ಸ್ಥಗಿತಗೊಂಡಿದೆ. ಆದ್ದರಿಂದ ಬಸ್ ನಿಲ್ದಾಣಗಳ ಕಾಮಗಾರಿ ಶೀಘ್ರ ಪೂರ್ಣಗೊಳಿಸಿ, ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

**ಅಧಿಕಾರಿಗಳ ಭೇಟಿ: ಬೇಡಿಕೆ ಈಡೇರಿಸುವ ಭರವಸೆ**

ಪ್ರತಿಭಟನಾ ಸ್ಥಳಕ್ಕೆ ಡಿಪೋ ಮ್ಯಾನೇಜರ್, ಪಿಡಬ್ಲ್ಯುಡಿ ಹಾಗೂ ಗ್ರಾಮ ಪಂಚಾಯಿತಿ ಅಧಿಕಾರಿಗಳು ಭೇಟಿ ನೀಡಿ ಪ್ರತಿಭಟನಾಕಾರರೊಂದಿಗೆ ಚರ್ಚಿಸಿದರು. ವಿದ್ಯಾರ್ಥಿಗಳ ಪ್ರಮುಖ ಬೇಡಿಕೆಗಳನ್ನು ಇಂದೇ ಹಾಗೂ ನಾಳೆಯೊಳಗೆ ಈಡೇರಿಸುವ ಭರವಸೆ ನೀಡಿದರು.

ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಬೆಳಿಗ್ಗೆ, ಮಧ್ಯಾಹ್ನ ಹಾಗೂ ಸಂಜೆ ಮೂರು ಸಮಯಗಳಲ್ಲಿ ಪ್ರತ್ಯೇಕ ಬಸ್‌ಗಳ ವ್ಯವಸ್ಥೆ ಮಾಡಲಾಗುವುದು. ಗ್ರಾಮ ಪಂಚಾಯಿತಿ ವತಿಯಿಂದ ರಾಜ್ಯ ಹೆದ್ದಾರಿಯಿಂದ ವಿದ್ಯಾರ್ಥಿ ವಸತಿ ನಿಲಯಗಳವರೆಗೆ ಬೀದಿ ದೀಪ ಅಳವಡಿಸಲಾಗುವುದು. ವಸತಿ ನಿಲಯಗಳಿಗೆ ತೆರಳುವ ರಸ್ತೆಯ ಅಕ್ಕಪಕ್ಕದ ಜಾಲಿ ಗಿಡಗಳನ್ನು ತೆರವುಗೊಳಿಸಿ ತಾತ್ಕಾಲಿಕ ಬಸ್ ನಿಲ್ದಾಣದ ವ್ಯವಸ್ಥೆ ಮಾಡಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದರು.

**ಪ್ರಮುಖ ಬೇಡಿಕೆಗಳು**

1. ವಿದ್ಯಾಗಿರಿ ಪ್ರದೇಶದ ಸಮೀಪದಲ್ಲಿ ಸಂಚರಿಸುವ ಎಲ್ಲಾ ಬಸ್‌ಗಳಿಗೆ ಕಡ್ಡಾಯ ನಿಲುಗಡೆ ಕಲ್ಪಿಸಿ, ವಿದ್ಯಾರ್ಥಿಗಳಿಗಾಗಿ ಪ್ರತ್ಯೇಕ ಬಸ್‌ಗಳ ವ್ಯವಸ್ಥೆ ಮಾಡಬೇಕು.
2. ಎರಡೂ ಬದಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಬಸ್ ನಿಲ್ದಾಣಗಳ ಕಾಮಗಾರಿ ಕೂಡಲೇ ಪೂರ್ಣಗೊಳಿಸಿ, ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು.
3. ನಿಗದಿತ ಸ್ಥಳದಲ್ಲಿ ಸುರಕ್ಷಿತವಾಗಿ ಬಸ್ ನಿಲುಗಡೆ ಮಾಡುವಂತೆ ಚಾಲಕರು ಮತ್ತು ನಿರ್ವಾಹಕರಿಗೆ ಸೂಚನೆ ನೀಡಬೇಕು.
4. ವಿದ್ಯಾಗಿರಿ ಪ್ರದೇಶದಲ್ಲಿ ನಿಯಂತ್ರಕರನ್ನು ನೇಮಕ ಮಾಡಬೇಕು.
5. ರಾಜ್ಯ ಹೆದ್ದಾರಿಯಿಂದ ವಿದ್ಯಾರ್ಥಿ ವಸತಿ ನಿಲಯಗಳವರೆಗೆ ಬೀದಿ ದೀಪ ಅಳವಡಿಸಬೇಕು.

ಪ್ರತಿಭಟನೆಯಲ್ಲಿ ಕಟ್ಟಡ ಕಾರ್ಮಿಕ ಸಂಘಟನೆಯ ರಾಜ್ಯ ಕಾರ್ಯದರ್ಶಿ ಶಬ್ಬೀರ್ ಜಾಲಹಳ್ಳಿ, ಯೂಸುಫ್ ಗ್ವಾಡಕರ್, ಎಸ್‌ಎಫ್‌ಐ ತಾಲೂಕು ಅಧ್ಯಕ್ಷ ಭಾಷಾ ಶಾನ್ಯರ್, ಕಾರ್ಯದರ್ಶಿ ಸಂತೋಷ್ ತ್ಯಾಪ್ಲಿ, ಬಾಬು ಶ್ಯಾನೇರ್, ಅಭಿಷೇಕ್, ಶಿವು, ನಿಂಗಯ್ಯ ಸುಣದಕಲ್, ಯಲ್ಲಪ್ಪ ಸುಣದಕಲ್, ಶಿವರಾಜ ಮುಂಡರಗಿ, ಲಕ್ಷ್ಮಣ ಪರಪೂರ, ರಂಗನಾಥ, ಹನುಮಂತ, ನಾಗರಾಜ ಪರಪೂರ, ಅಮೀರ್ ಹುಸೇನ್ ಸೇರಿದಂತೆ ಹಲವರು ಹಾಗೂ ವಿದ್ಯಾರ್ಥಿಗಳಾದ ಅನೀತಾ, ಶಿಲ್ಪಾ, ರೇಷ್ಮಾ, ಸುನೀತಾ, ಬಂಧನ ವಾಜ, ಆಜಿಮಲಾಗಾ, ಹನುಮಂತ ಗಲಗ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ನದಾಫ್ ಸಮಾಜದಿಂದ ಅರ್ಥಪೂರ್ಣ ಈದ್ ಮಿಲಾದ್ ಆಚರಣೆ

❑ ನೈಜ್ಯ ದೆಸೆ ನ್ಯೂಸ್

**ಮುಧೋಳ: ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರ ಜನ್ಮದಿನದ ಅಂಗವಾಗಿ ನದಾಫ್ ಸಮಾಜದ ಹಿರಿಯರು, ಯುವಕರು ಹಾಗೂ ಮಹಿಳೆಯರು ಒಗ್ಗೂಡಿ ಈದ್ ಮಿಲಾದ್ ಹಬ್ಬವನ್ನು ಅರ್ಥಪೂರ್ಣವಾಗಿ ಹಾಗೂ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ರೀತಿಯಲ್ಲಿ ಆಚರಿಸಿದರು.**




ಈದ್ ಮಿಲಾದ್ ಅಂಗವಾಗಿ ನದಾಫ್ ಸಮಾಜದ ವತಿಯಿಂದ ಮುಧೋಳ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳಿಗೆ ಹಣ್ಣುಗಳ ಕಿಟ್‌ಗಳನ್ನು ವಿತರಿಸಲಾಯಿತು. ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಗಳು, ವೈದ್ಯರು, ಆರೋಗ್ಯ ರಕ್ಷಣಾ ಸಮಿತಿಯ ಸದಸ್ಯರಾದ ಲಕ್ಕಪ್ಪ ಬಂಡಿವಡ್ಡರ, ಡಾ. ಗಣಾಚಾರಿ ಹಾಗೂ ಸಿಬ್ಬಂದಿಯ ಸಹಕಾರದೊಂದಿಗೆ ಕಾರ್ಯಕ್ರಮ ನಡೆಯಿತು. ನಂತರ ಬುದ್ಧಿಮಾಂದ್ಯ ಮಕ್ಕಳ ಸಂಸ್ಥೆಗೆ ತೆರಳಿದ ಸಮಾಜದ ಸದಸ್ಯರು ಮಕ್ಕಳೊಂದಿಗೆ ಸಮಯ ಕಳೆದು, ಅವರೊಂದಿಗೆ ಬೆರೆತು ಊಟ ಬಡಿಸಿ, ತಾವೂ ಅವರೊಂದಿಗೆ ಊಟ ಮಾಡುವ ಮೂಲಕ ಈದ್ ಮಿಲಾದ್ ಆಚರಿಸಿದರು.

ಸಮಾಜದ ಹಿರಿಯರಾದ ಸೈಯದ್ ನದಾಫ್ ಮಾತನಾಡಿ, "ಜಗತ್ತಿಗೆ ಶಾಂತಿ, ಸಹಬಾಳ್ವೆ ಹಾಗೂ ಮಾನವೀಯತೆಯ ಸಂದೇಶ ಸಾರಿದ ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರ ಜನ್ಮದಿನವನ್ನು ಸಮಾಜಮುಖಿ ಕಾರ್ಯಗಳ ಮೂಲಕ ಆಚರಿಸುವುದು ನಮ್ಮೆಲ್ಲರ ಕರ್ತವ್ಯ. ಈ ಹಿನ್ನೆಲೆಯಲ್ಲಿ ರೋಗಿಗಳಿಗೆ ಹಣ್ಣು ವಿತರಣೆ ಹಾಗೂ ಬುದ್ಧಿಮಾಂದ್ಯ ಮಕ್ಕಳೊಂದಿಗೆ ಊಟ ಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಗಿದೆ" ಎಂದರು. ಸಮಾಜದ ಹಿರಿಯರಾದ ಲಾಲಸಾಬ ನದಾಫ್ ಮಾತನಾಡಿ, "ಪ್ರತಿ ವರ್ಷದಂತೆ ಈ ವರ್ಷವೂ ಈದ್ ಮಿಲಾದ್ ಆಚರಣೆಯನ್ನು ಸಮಾಜಕ್ಕೆ ಉತ್ತಮ ಸಂದೇಶ ನೀಡುವ ರೀತಿಯಲ್ಲಿ ನಡೆಸಲು ನಿರ್ಧರಿಸಲಾಗಿತ್ತು.

ರೋಗಿಗಳಿಗೆ ಹಣ್ಣುಗಳ ಕಿಟ್ ವಿತರಿಸುವುದರ ಜೊತೆಗೆ ಬುದ್ಧಿಮಾಂದ್ಯ ಮಕ್ಕಳೊಂದಿಗೆ ಬೆರೆತು, ಅವರೊಂದಿಗೆ ಸಮಯ ಕಳೆದು, ಊಟ ಮಾಡುವ ಮೂಲಕ ಮಾನವೀಯತೆ ಮೆರೆದಿದ್ದೇವೆ. ಎಲ್ಲರೂ ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರು ತೋರಿಸಿಕೊಟ್ಟ ದಾರಿಯಲ್ಲಿ ನಡೆದು, ಸಮಾಜದಲ್ಲಿ ಶಾಂತಿ ಮತ್ತು ಸಹೋದರತ್ವ ಬೆಳೆಸಬೇಕು" ಎಂದು ಹೇಳಿದರು. ಬುದ್ಧಿಮಾಂದ್ಯ ಮಕ್ಕಳ ಸಂಸ್ಥೆಗೆ ಅಗತ್ಯವಿರುವ ಸೌಲಭ್ಯಗಳ ಕುರಿತು ವಿಚಾರಿಸಿದಾಗ, ನೀರನ್ನು ಮೇಲಕ್ಕೆತ್ತಲು ಒಂದು ಎಚ್‌ಪಿ ಸಾಮರ್ಥ್ಯದ ಮೋಟಾರ್ ಅಗತ್ಯವಿದೆ ಎಂದು ಸಂಸ್ಥೆಯವರು ತಿಳಿಸಿದರು.

ಇದಕ್ಕೆ ಸ್ಪಂದಿಸಿದ ಲಾಲಸಾಬ ನದಾಫ್ ಅವರು, "ಎರಡು ದಿನಗಳೊಳಗೆ ನದಾಫ್ ಸಮಾಜದ ವತಿಯಿಂದ ಒಂದು ಎಚ್‌ಪಿ ಮೋಟಾರ್ ಒದಗಿಸಲಾಗುವುದು" ಎಂದು ಭರವಸೆ ನೀಡಿದರು. ಕುಮಾರಿ ರುಬಿನಾ ನದಾಫ್ ಮಾತನಾಡಿ, "ಬುದ್ಧಿಮಾಂದ್ಯ ಮಕ್ಕಳೊಂದಿಗೆ ಊಟ ಮಾಡುವ ಮೂಲಕ ಈದ್ ಮಿಲಾದ್ ಆಚರಿಸಿರುವುದು ಸಂತೋಷದ ಸಂಗತಿ. ಈ ಮಕ್ಕಳು ಶೀಘ್ರ ಗುಣಮುಖರಾಗಿ ಸಾಮಾನ್ಯರಂತೆ ಜೀವನ ನಡೆಸುವಂತಾಗಲಿ ಎಂದು ಸೃಷ್ಟಿಕರ್ತ ಅಲ್ಲಾಹನಲ್ಲಿ ಪ್ರಾರ್ಥಿಸೋಣ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಮಾಜದ ಹಿರಿಯರಾದ ಪ್ರಥಮ ದರ್ಜೆ ಗುತ್ತಿಗೆದಾರ ಮಮ್ಮದ ನದಾಫ್, ಲ್ಯಾಬ್ ಟೆಕ್ನಿಷಿಯನ್ ಇಬ್ರಾಹಿಂ ನದಾಫ್, ಸೈಯದ್ ನದಾಫ್, ದಾವಲಸಾಬ ನದಾಫ್, ರಫೀಕ್ ನದಾಫ್, ಉಸ್ಮಾನ್ ನದಾಫ್, ಬ್ಯಾಟರಿ ಗ್ಯಾರೇಜ್ ಮಾಲೀಕರಾದ ಇಬ್ರಾಹಿಂ ನದಾಫ್, ಖಾಸಿಂ ನದಾಫ್, ಅಮೀನಸಾಬ ನದಾಫ್, ಯಾಸೀನ್ ನದಾಫ್, ಹಣ್ಣು ವ್ಯಾಪಾರಿ ಮೊಹಮ್ಮದ್ ನದಾಫ್, ಆಲಗುಂಡಿ ಬಿ.ಕೆ. ಅಮೀನಸಾಬ ನದಾಫ್ ಸೇರಿದಂತೆ ಸಮಾಜದ ಹಿರಿಯರು, ತಾಯಂದಿರು, ಯುವಕರು ಹಾಗೂ ಸಮಾಜದ ಬಂಧುಗಳು ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೆ ಸಹಕಾರ ನೀಡಿದ ಎಲ್ಲರಿಗೂ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ ಸಮಾಜದ ಎಲ್ಲ ಬಂಧು-ಬಾಂಧವರಿಗೆ ನದಾಫ್ ಸಮಾಜದ ವತಿಯಿಂದ ಕೃತಜ್ಞತೆ ಸಲ್ಲಿಸಲಾಯಿತು.

